ಸಂಪುಟ 01 | ಸಂಚಿಕೆ 152 ಶುಕ್ರವಾರ 07 ಆಗಸ್ಟ್ 2026 | ಪುಟ 4 | ಬೆಲೆ-2 ರೂ.

ಇರ್ಫಾನ್ ಕೆ
ಸಂಪಾದಕರು

M A ವಹಾಬ್
ಪ್ರಧಾನ ಸಂಪಾದಕರು

# ನೈಜ್ಯ ದೆಸೆ

NAIJYA DESE

ಸತ್ಯದ ದಿಕ್ಕು TRUE PATH

ಕನ್ನಡ ದಿನ ಪತ್ರಿಕೆ

ಸಿಂಧನೂರು, ಮಸ್ಕಿ ಮಾನ್ವಿ, ಲಿಂಗಸೂರು, ರಾಯಚೂರ,ದೇವದುರ್ಗ ಬಳ್ಳಾರಿ, ಕೊಪ್ಪಳ ಯಾದಗಿರಿ, ಕಲಬುರ್ಗಿ, ಬೀದರ, ವಿಜಯಪುರ. ಗದಗ, ವಿಜಯನಗರ. ಏಕಕಾಲಕ್ಕೆ ಪ್ರಕಟಣೆ

REGIONAL KANNADA DAILY MORNING

RNI code: KNKAN/25/A3581 ಮೋ: 9902277588, 9880707587, 9008787586 naijyadese@gmail.com

## ಈ ದಿನದ ವಿಶೇಷ

1)ರಾಷ್ಟ್ರೀಯ ಕೈಮಗ್ಗ ದಿನ (National Handloom Day)
ರಾಷ್ಟ್ರೀಯ ಕೈಮಗ್ಗ ದಿನವನ್ನು ಭಾರತದಲ್ಲಿ ಪ್ರತಿವರ್ಷ ಆಗಸ್ಟ್ 7 ರಂದು ಆಚರಿಸಲಾಗುತ್ತದೆ. ಈ ದಿನವು ದೇಶದ ಸಮೃದ್ಧ ಕೈಮಗ್ಗ ಪರಂಪರೆಯನ್ನು ಗೌರವಿಸುವುದರ ಜೊತೆಗೆ, ಲಕ್ಷಾಂತರ ನೇಕಾರರು ಮತ್ತು ಕರಕುಶಲ ಕಲಾವಿದರ ಶ್ರಮವನ್ನು ಸ್ಮರಿಸುವ ಉದ್ದೇಶ ಹೊಂದಿದೆ.

2) ಪರ್ಪಲ್ ಹಾರ್ಟ್ ಡೇ (Purple Heart Day)
? ಯುದ್ಧದಲ್ಲಿ ಗಾಯಗೊಂಡ ಅಥವಾ ಹುತಾತ್ಮರಾದ ಅಮೆರಿಕದ ಸೈನಿಕರನ್ನು ಗೌರವಿಸುವ ದಿನ.

3) ಅಂತರರಾಷ್ಟ್ರೀಯ ಬಿಯರ್ ದಿನ (International Beer Day) ಪ್ರತಿ ವರ್ಷದ ಆಗಸ್ಟ್ ಮೊದಲ ಶುಕ್ರವಾರ ಆಚರಿಸಲಾಗುತ್ತದೆ. 2026ರಲ್ಲಿ ಇದು ಆಗಸ್ಟ್ 7ರಂದು ಬಂದಿದೆ.

## ಸುಭಾಷಿತ

ಒಂದು ಲಿಲ್ಲಿಯಾಗಲಿ ಅಥ-
'ವಾ ಗುಲಾಬಿಯಾಗಲಿ ಎಂದಿಗೂ
ನಟಿಸುವುದಿಲ್ಲ, ತನ್ನ ಮೂಲಗುಣ-
ಕ್ಕೆ ತಕ್ಕಂತೆ ಇರುವುದೇ ಅದರ
ಸೌಂದರ್ಯದ ಗುಟ್ಟು.

-ಜಿಡ್ಡು ಕೃಷ್ಣಮೂರ್ತಿ

ನೈಜ್ಯ ದೆಸೆ
ಕನ್ನಡ ದಿನಪತ್ರಿಕೆಯನ್ನು ತಪ್ಪದೆ ಓದಿರಿ.

## ಕೃತಕ ಬುದ್ಧಿ ಮತ್ತೆ ಹೆಚ್ಚಳ : ಆಂಥ್ರೋಪಿಕ್ ನಿಯೋಗದ ಜೊತೆ ಸಿಎಂ ಚರ್ಚೆ

ನೈಜ್ಯ ದೆಸೆ ನ್ಯೂಸ್



ಬೆಂಗಳೂರು: ಆಡಳಿತ, ಉನ್ನತ ಶಿಕ್ಷಣ, ಆರೋಗ್ಯ ರಕ್ಷಣೆ, ಸಂಶೋಧನೆ ಹಾಗೂ ರಾಜ್ಯದ ಸ್ಟಾರ್ಟ್‌ಅಪ್ ಪರಿಸರ ವ್ಯವಸ್ಥೆಯಲ್ಲಿ ಕೃತಕ ಬುದ್ಧಿಮತ್ತೆಯ (ಎಐ) ಬಳಕೆ ಹೆಚ್ಚಿಸಲು ಸುದೀರ್ಘ ಸಹಭಾಗಿ-ತ್ವ ಸಾಧಿಸುವ ಕುರಿತು ಕರ್ನಾಟಕದ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರು 'ಆಂಥ್ರೋಪಿಕ್' ಸಂಸ್ಥೆಯ ನಿಯೋಗದೊಂದಿಗೆ ಚರ್ಚೆ ನಡೆಸಿದರು.

ಕರ್ನಾಟಕದಲ್ಲಿ ಎಐ ಪರಿಸರ ವ್ಯವಸ್ಥೆಯನ್ನು ನಿರ್ಮಿಸುವ ಪ್ರಕ್ರಿಯೆಯಲ್ಲಿ ಜಾಗತಿಕ ಎಐ ನಾಯಕರನ್ನು ತೊಡಗಿಸಿಕೊಳ್ಳುವ ರಾಜ್ಯದ ಪ್ರಯತ್ನಗಳ ಭಾಗವಾಗಿ, ಐಟಿ ಬಿಟಿ ಸಚಿವರಾದ ಸಚಿವ ಪ್ರಿಯಾಂಕ್ ಖರ್ಗೆ ಅವರು ಆಂಥ್ರೋಪಿಕ್ ನಿಯೋಗದೊಂದಿಗೆ ಮುಖ್ಯಮಂತ್ರಿಗಳನ್ನು ಇಂದು ಭೇಟಿ ಮಾಡಿದರು.

ಜವಾಬ್ದಾರಿಯುತ ಬಳಕೆ, ಡೇಟಾ ಗೌಪ್ಯತೆ ಮತ್ತು ಡೇಟಾ ಸಾರ್ವಭೌಮತ್ವವನ್ನು ಖಚಿತಪಡಿಸಿಕೊಳ್ಳುವ ಮೂಲಕ, ಸರ್ಕಾರ ಹಾಗೂ ಉದ್ಯಮಗಳಿಗಾಗಿ ಅನ್ವಯಿಕ ಎಐ ಪರಿಹಾರಗಳ "ಪ್ರಯೋಜನಕಾರಿ ಅಳವಡಿಕೆ"ಯ ಕುರಿತು ಈ ಸಭೆಯಲ್ಲಿ ಪ್ರಮುಖವಾಗಿ ಚರ್ಚಿಸಲಾಯಿತು.

ಪ್ರಸ್ತಾವಿತ 'ಎಐ ವಿಶ್ವವಿದ್ಯಾಲಯ', ಬೃಹತ್ ಮಟ್ಟದ ಕೌಶಲ್ಯಾಭಿವೃದ್ಧಿ ಯೋಜನೆಗಳು ಮತ್ತು ಡೀಪ್-ಟೆಕ್ ಅನ್ವೇಷಣೆಗಳಿಗೆ ನೀಡುವ ಬೆಂಬಲವನ್ನು ಒಳಗೊಂಡಂತೆ ಸಮಗ್ರ ಎಐ ಪರಿಸರ ವ್ಯವಸ್ಥೆಯನ್ನು ನಿರ್ಮಿಸುವ ಕರ್ನಾಟಕದ ದೃಷ್ಟಿಕೋನವನ್ನು ಮುಖ್ಯಮಂತ್ರಿಗಳು ವಿವರಿಸಿದರು. ದೇಶದಲ್ಲೇ ಅತಿ ದೊಡ್ಡ ಎಐ ಪ್ರಮಾಣೀಕೃತ ಪ್ರತಿಭಾವಂತರನ್ನು ರೂಪಿಸಲು, ರಾಜ್ಯದ 'ನಿಪುಣ' ಕಾರ್ಯಕ್ರಮದಡಿ 'ಕ್ಲಾಡ್' ಸರ್ಟಿಫಿಕೇಶನ್ ಸೇ-ರಿದಂತೆ ಎಐ-ಸಂಬಂಧಿತ ಸರ್ಟಿಫಿಕೇಶನ್ ಕೋರ್ಸ್‌ಗಳನ್ನು ಪರಿಚಯಿಸುವ ಬಗ್ಗೆ ಚರ್ಚಿಸಿದರು.


ಆರೋಗ್ಯ ರಕ್ಷಣೆ ಮತ್ತು ಲೈಫ್ ಸೈನ್ಸಸ್ ಕ್ಷೇತ್ರಗಳಲ್ಲಿ ಎಐ ಬಳಕೆ, ಹಾಗೂ ಭಾರತೀಯ ವಿಜ್ಞಾನ ಸಂಸ್ಥೆಯ ಸಹಯೋಗದೊಂದಿಗೆ ವೈಜ್ಞಾನಿಕ ಸಂಶೋಧನೆಗಾಗಿ ಎಐ ಬಳಸುವ ಕು-ರಿತು ಚರ್ಚೆಗಳು ನಡೆದವು. ಉನ್ನತ ಶಿಕ್ಷಣದಲ್ಲಿ ಎಐ ಆಧಾರಿತ ಸಂಶೋಧನೆ ಮತ್ತು ಕೌಶಲ್ಯಾಭಿವೃದ್ಧಿ ಕಾರ್ಯಕ್ರಮಗಳಿಗೆ ಬೆಂಬಲ ನೀಡಲು ಆಂಥ-'್ರೋಪಿಕ್ ನಿಯೋಗವು ಆಸಕ್ತಿ ವ್ಯಕ್ತಪಡಿಸಿತು.

ಉದ್ಯಮಗಳಲ್ಲಿ ಎಐ ಅಳವಡಿಕೆ, ಡೇಟಾ ಸ್ಥಳೀಯತೆ ಮತ್ತು ಸಾರ್ವಭೌಮ ಸರ್ಕಾರಿ ಡೇಟಾವನ್ನು ರಾಜ್ಯದೊಳಗಿನ ಸರ್ವರ್‌ಗಳಲ್ಲೇ ಸಂಗ್ರಹಿಸುವುದನ್ನು ಖಚಿತಪಡಿಸಿಕೊಳ್ಳುವ ಬಗ್ಗೆಯೂ ಪ್ರಮುಖವಾಗಿ ಚರ್ಚಿಸಲಾಯಿತು. ರಾಜ್ಯ ಸರ್ಕಾರವು ತನ್ನ "ಸರ್ಕಾರಕ್ಕೆ ಮೊದಲ ಆದ-್ಯತೆ" ನೀತಿಯನ್ನು ಪುನರುಚ್ಚರಿಸಿತು. ಎಐ ಆದ-ಾರಿತ ಸಾರ್ವಜನಿಕ ಪರಿಹಾರಗಳ ಅಭಿವೃದ್ಧಿಗೆ ಅನುಕೂಲವಾಗುವಂತೆ ಸರ್ಕಾರಿ ಡೇಟಾಸೆಟ್‌ಗಳನ್ನು ಸುರಕ್ಷಿತವಾಗಿಡುವ ಬಗ್ಗೆ ಚರ್ಚಿಸಿದರು.

ಇ-ಆಡಳಿತ, ಗೃಹ ಇಲಾಖೆ ಹಾಗೂ ಇತರ ಸರ್ಕಾರಿ ಸಂಸ್ಥೆಗಳಲ್ಲಿ ಎಐ ಅನ್ವಯಿಕೆಗಳನ್ನು ಗುರುತಿಸಲು ಇಲಾಖಾವಾರು ಕಾರ್ಯಪಡೆಗಳನ್ನು ರಚಿಸುವ ಕುರಿತೂ ಸಭೆಯಲ್ಲಿ ಪರಿಶೀಲಿಸಲಾಯಿತು. ಸೈಬರ್ ಬೆದರಿಕೆಗಳ ವಿರುದ್ಧದ ಸುರಕ್ಷತಾ ಕ್ರಮಗಳು, ನಾಗರಿಕರ ಡೇಟಾ ಮತ್ತು ಗೌಪ್ಯತೆಯ ರಕ್ಷಣೆ ಸೇರಿದಂತೆ ಜವಾಬ್ದಾರಿಯುತ ಎಐ ಪದ್ಧತಿಗಳನ್ನು ಭವಿಷ್ಯದ ಯೋಜನಾ ಅಳವಡಿಕೆಗಳ ಅಗತ್ಯ ಅಂಶಗಳಾಗಿ ಚರ್ಚಿಸಲಾಯಿತು.

## ಬಾದಾಮಿಯಲ್ಲಿ "ಮಂದಾರ ಹೂವು" ಚಲನಚಿತ್ರ ಚಿತ್ರೀಕರಣ ಆರಂಭ

ನೈಜ್ಯ ದೆಸೆ ನ್ಯೂಸ್



ಬಾದಾಮಿ: ವಸಂತ ಬಸವ ಪ್ರೊಡಕ್ಷನ್ಸ್ ಮೂಡಬಿ-ಬಸವಕಲ್ಯಾಣ ಬ್ಯಾನರ್ ಅಡಿಯಲ್ಲಿ "ಮಂದಾರ ಹೂವು" 'ಇವಳು ನಮ್ಮ ಮನೆ ಮಗಳು' ಉಪ ಶೀರ್ಷಿಕೆಯ ಕನ್ನಡ ಚಲನಚಿತ್ರದ ಚಿತ್ರೀಕರಣದ ಮುಹೂರ್ತ ಸಮಾರಂಭ ಚಾಲುಕ್ಯರ ನಾಡು ಐತಿಹಾಸಿಕ ಸ್ಥಳ ಬಾದಾಮಿಯಲ್ಲಿ ನೆರವೇರಿತು.

ಬಾದಾಮಿಯ ಹೃದಯಭಾಗದಲ್ಲಿರುವ ಚೌಡಿಯ ದೊಡ್ಡ ಆಂಜನೇಯ ದೇವಸ್ಥಾನದಲ್ಲಿ ದೇವಸ್ಥಾನದ ಪೂಜಾರ ಮನೆತನದವರಿಂದ ಆಂಜನೇಯನಿಗೆ ವಿಶೇಷ ಪೂಜೆ ನೆರವೇರಿಸಿ ನಂತರ ಕ್ಯಾಮರಾ ಚಾಲನೆ ಮಾಡಿ ದೇವಸ್ಥಾನದಲ್ಲಿಯೇ ಮೊದಲ ದೃಶ್ಯವನ್ನು ಚಿತ್ರೀಕರಿಸಲಾಯಿತು.

ಕನ್ನಡ ಚಿತ್ರರಂಗದ ಖ್ಯಾತ ನಿರ್ದೇಶಕರಾದ ನಾಗತಿಹಳ್ಳಿ ಚಂದ್ರಶೇಖರ್ ಸಾರಥ್ಯದ ಅವರ ಶಿಷ್ಯರಾದ ಶಾಂತಕುಮಾರ್ ಪಾಟೀಲ್ ಕಥೆ-ಚಿತ್ರಕಥೆ -ನಿರ್ದೇಶನದಲ್ಲಿ 'ಮಂದಾರ ಹೂವು' ಚಿತ್ರ ನಿರ್ಮಾಣವಾಗುತ್ತಿದ್ದು, ಚಿತ್ರದಲ್ಲಿ ಮೂರು ಹಾಡುಗಳಿದ್ದು ಶಾಂತಕುಮಾರ ಅವರೆ ರಚಿಸಿದ್ದಾರೆ. ಬಾದಾಮಿ, ಮುತ್ತಲಗೇರಿ, ಬನಶಂಕರಿ ಸುತ್ತಮುತ್ತ ನಲವತ್ತು ದಿನಗಳ ಕಾಲ ಚಿತ್ರೀಕರಣ ನಡೆಯಲಿದೆ ಎಂದು ನಿರ್ದೇಶಕ ಶಾಂತಕುಮಾರ ತಿಳಿಸಿದ್ದಾರೆ.

ಗಿರೀಶ್ ಶಿರಗನಹಳ್ಳಿ ಛಾಯಾಗ್ರಹಣ , ಕಲಾ ನಿರ್ದೇಶಕರಾದ ಪತ್ರಕರ್ತ ರಾಜೇಶ್. ಎಸ್. ದೇಸಾಯಿ, ಹರ್ಷ ಕಾಗೋಡು ಸಂಗೀತ, ಸುನ್ಯೆ ಎಸ್ ಜೈನ್ ಸಂಕಲನ , ಪತ್ರಿಕಾ ಸಂಪರ್ಕ ಡಾ.ಪ್ರಭು ಗಂಜಿಹಾಳ ,ಡಾ.ವೀರೇಶ ಹಂಡಿಗಿ, ಸಹಾಯಕ ನಿರ್ದೇಶನ ಸುನಿಲ್. ಎಸ್. ಭಜಂತ್ರಿ, ತುಳಸಪ್ಪ ಪಾಟ್ರೋಟಿ ರವಿ. ಎಚ್. ದೇಸಾಯಿ, ಸುಜಲ್ ರಾಠೋಡ ನವೀನ್ ರೋಡ್ಕರ್, ಮುಖ್ಯ ಮೇಲ್ವಿಚಾರಕಣೆ ಹಾಗೂ ಸಂಚಾಲಕರು ಪ್ರಭುರಾಜ್ ಹೂಲಗೇರಿ ಮಾಡುತ್ತಿದ್ದಾರೆ.

ತಾರಾಗಣದಲ್ಲಿ ಅಕ್ಷಯ್ ಪತ್ತಾರ, ನಾಯಕಿ ಸ್ವಾತಿ ತೋಟರ, ಖಳನಟ ಆನಂದ್ ದೇವಾಡಿಗ, ರವಿ, ಎಚ್. ದೇಸಾಯಿ, ವಸಂತ ಬಡಿಗೇರ ನವೀನ್ ರೋಡ್ಕರ್, ವಸಂತ ಬಡಿಗೇರ, ಮಂಜು ಬೆಳ್ಳಿಗುಂಡಿ, ಸಂಜನಾ (ತೇಜಸ್ವಿನಿ),ಕಾವೇರಿ, ಚಂದ್ರಿಕಾ, ಪ್ರೇಮಾ ತುಡಬಿನ್, ಸ್ವಾತಿ ರಾಠೋಡ, ಶೈಲಾ ರಾಠೋಡ, ಮಂಜು ಎಚ್ ದೇಸಾಯಿ, ತುಳಸಪ್ಪ ಪಾತ್ರೋಟಿ, ಪ್ರಕಾಶ್ ಗದ್ದಿಗೌಡ್ರ ಸೇರಿದಂತೆ ಉತ್ತರ ಕರ್ನಾಟಕದ ಅನೇಕ ಕಲಾವಿದರು ಅಭಿನಯಿಸಲಿದ್ದಾರೆ.

-ಡಾ.ಪ್ರಭು ಗಂಜಿಹಾಳ

## ಕಾಂಗ್ರೆಸ್ ಶಿಸ್ತಿನ ಪಕ್ಷವಾಗಿದ್ದು, ಯಾವುದೇ ಜವಾಬ್ದಾರಿ ನೀಡಿದರೂ ನಿಭಾಯಿಸುವೆ : ಶಾಸಕ ಜೆ.ಎನ್.ಗಣೇಶ

ನೈಜ್ಯ ದೆಸೆ ನ್ಯೂಸ್



ಬಳ್ಳಾರಿ / ಕಂಪ್ಲಿ: ಪಕ್ಷದಲ್ಲಿ ಶಿಸ್ತು ಅತಿಮುಖ್ಯವಾಗಿದ್ದು, ಕಂಪ್ಲಿ ಕ್ಷೇತ್ರದ ಜನರು, ಅಭಿಮಾನಿಗಳು ಕಂಪ್ಲಿಯಿಂದ ಹೈಕಮಾಂಡ್ ವರೆಗೆ ನಮಗೆ ಸಚಿವ ಸ್ಥಾನಕ್ಕಾಗಿ ಧ್ವನಿ ಮಾಡುವ ಮೂಲಕ ಪ್ರಾಮಾಣಿಕ ಪ್ರಯತ್ನ ಮಾಡಿದ್ದಾರೆ.

ಒಂದು ವೇಳೆ ಮುಂದಿನ ದಿನದಲ್ಲಿ ಸಚಿವ ಸ್ಥಾನ ನೀಡಿದರೆ, ಸ್ವೀಕರಿಸುವೆ. ಪಕ್ಷದ ನಿರ್ಧಾರಕ್ಕೆ ಸದಾ ಬದ್ಧ ಎಂದು ಶಾಸಕ ಜೆ. ಎನ್.ಗಣೇಶ ಸ್ಪಷ್ಟಪಡಿಸಿದರು. ಅವರು ಗುರುವಾರ ಪಟ್ಟಣದ ಹೊಸಪೇಟೆ ಬೈಪಾಸ್ ರಸ್ತೆಯ ಶಾಸಕರ ಕಛೇರಿಯಲ್ಲಿ ಹಮ್ಮಿಕೊಂಡಿದ್ದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿ, ಪಕ್ಷ ನೀಡುವ ಪ್ರತಿಯೊಂದು ಜವಾಬ್ದಾರಿ ಪ್ರಾಮಾಣಿಕವಾಗಿ ನಿಭಾಯಿಸಲಾಗುವುದು.

ಬಳ್ಳಾರಿ, ವಿಜಯನಗರ, ಕೊಪ್ಪಳ, ರಾಯಚೂರು ಸೇರಿದಂತೆ ಕರ್ನಾಟಕ, ಆಂಧ್ರ, ತೆಲಂಗಾಣದ ಮೂರು ರಾಜ್ಯದ ರೈತರ ಜೀವನಾಡಿ ತುಂಗಭದ್ರಾ ಜಲಾಶಯದಲ್ಲಿ ಮಲೆನಾಡಿನಲ್ಲಿ ಉತ್ತಮ ಮಳೆಯಾದ ಹಿನ್ನಲೆ ಪ್ರಸ್ತುತ 64 ಟಿಎಂಸಿ ನೀರು ಸಂಗ್ರಹವಾಗಿರುವುದು ಸಂತಸ ತಂದಿದೆ.

ಸಿಎಂ ಮತ್ತು ಜಿಲ್ಲಾ ಸಚಿವರ ಗಮನಕ್ಕೆ ಈ ಭಾಗದ ರೈತರ ಸಂಕಷ್ಟ ತಿಳಿಸಿದ್ದು, ಆದಷ್ಟು ಬೇಗ ತುಂಗಭದ್ರಾ ನೀರಾವರಿ ಸಲಹಾ ಸಮಿತಿ ಸಭೆ ಕರೆದು, ರೈತರು ಬೆಳೆ ಬೆಳೆಯಲು ನೀರು ಒದಗಿಸಬೇಕು.ಈಗಾಗಲೇ ರೈತರು ಹಾಕಿರುವ ಸಸಿ ಮಡಿಗಳು ಒಣಗುತ್ತಿದ್ದು, ಇದರಿಂದ ಸಂಕಷ್ಟ ಎದುರಾಗಿದೆ. ಆದ್ದರಿಂದ ಸರ್ಕಾರ, ನೀರಾವರಿ ಸಲಹಾ ಸಮಿತಿಯು ಜಲಾಶಯದ ಮುನಿರಾಬಾದ್ ನಲ್ಲೇ ಪ್ರತಿ ಸಲಹಾ ಸಮಿತಿ ಸಭೆ ನಡೆಸಬೇಕು. ಅಂದಾಗ ಮಾತ್ರ ಈ ಭಾಗದ ರೈತರ ಸಂಕಷ್ಟ ಆಲಿಸಲು ಸಾಧ್ಯ ಎಂದರು.

ಈ ಸಂದರ್ಭದಲ್ಲಿ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷರಾದ ಕೆ.ಶ್ರೀನಿವಾಸರಾವ್, ಚನ್ನಬಸವರಾಜಗೌಡ ಸೇರಿದಂತೆ ಇತರರಿದ್ದರು.

## ಪತ್ರಕರ್ತರ ಧ್ವನಿ ಸಂಘಟನೆಯ 4ನೇ ರಾಜ್ಯ ಸಮ್ಮೇಳನಕ್ಕೆ ಡಾ .ಜಲಾಲುದ್ದೀನ್ ಕರೆ

ನೈಜ್ಯ ದೆಸೆ ನ್ಯೂಸ್



ಲಿಂಗಸಗೂರು: ಧ್ವನಿಯಿಲ್ಲದವರ ಧ್ವನಿಯಾಗಿ ಪತ್ರಕರ್ತರ ಹಕ್ಕುಗಳಿಗಾಗಿ ಸಿಂಹ ಘರ್ಜನೆ ಮಾಡುವ ಏಕೈಕ ರಾಜ್ಯಾಧ್ಯಕ್ಷ ಬಂಗ್ಲೆ ಮಲ್ಲಿಕಾರ್ಜುನ ರವರ ನೇತೃತ್ವದಲ್ಲಿ ನಡೆಯುವ ಸಮ್ಮೇಳನಕ್ಕೆ ರಾಜ್ಯದ ಎಲ್ಲ ಸಂಘಟಿ-ತ ಹಾಗೂ ಅಸಂಘಟಿತ ಪತ್ರಕರ್ತರಿಗೆ ಸಮ್ಮೇಳನ ದಲ್ಲಿ ಪಾಲ್ಗೊಳ್ಳಲು ರಾಜ್ಯ ಸಮಿತಿ ಸದಸ್ಯ ಡಾ. ಜಲಾಲುದ್ದೀನ್ ಅಕ್ಬರ್ ಕರೆ ನೀಡಿದ್ದಾರೆ .

ಅವರಿಂದು ಪಟ್ಟಣದ ಪ್ರವಾಸಿ ಮಂದಿರದಲ್ಲಿ ಸುದ್ದಿಗೋಷ್ಠಿ ನಡೆಸಿ ಮಾತನಾಡಿದ ಅವರು ಕರ್ನಾಟಕ ಕಾರ್ಯನಿರತ ಪತ್ರಕರ್ತರ ಧ್ವನಿ ಸಂಘಟನೆಯ ವತಿಯಿಂದ 4 ನೇ ರಾಜ್ಯ ಮಟ್ಟದ ಪತ್ರಕರ್ತರ ಸಮ್ಮೇಳನ ಹಾಗೂ ರಾಜ್ಯ ಪ್ರಶಸ್ತಿ ಪ್ರಧಾನ ಕಾರ್ಯಕ್ರಮವು ದಿನಾಂಕ 08-08-2026 ರ 2 ನೇ ಶನಿವಾರ ಸಮಯ ಬೆಳಗ್ಗೆ 10-30ಕ್ಕೆ ಬೆಂಗಳೂ-ರಿನ ನೆಲಮಂಗಲದ ಪುಷ್ಪ ಬೈರೇಗೌಡ ಕಾನ್ವೆಂಷನ್ ಹಾಲ್ ನಲ್ಲಿ ಜರುಗಲಿದೆ ಈ ನಮ್ಮ ಪತ್ರಕರ್ತರ ಹಬ್ಬಕ್ಕೆ ಸಮ್ಮೇಳನದ ಉದ್ಘಾಟಕರಾಗಿ ನಿವೃತ್ತ ಸುಪ್ರೀಂ ಕೋರ್ಟ್ ನ ನ್ಯಾಯದೀಶರಾದ ಎನ್ ಸಂತೋಷ ಹೆಗಡೆ ಯವರು ಆಗಮಿಸಲಿದ್ದು

ಈ ಕಾರ್ಯಕ್ರಮದ ಅಧ್ಯಕ್ಷತೆಯನ್ನು ಕರ್ನಾಟಕ ಕಾರ್ಯನಿರತ ಪತ್ರಕರ್ತರ ಧ್ವನಿ ಸಂಘಟನೆಯ ರಾಜ್ಯಾಧ್ಯಕ್ಷ ಮಲ್ಲಿಕಾರ್ಜುನ ಬಂಗ್ಲೆ ಯವರು ವಹಿಸಲಿದ್ದಾರೆ . ಈ ಕಾರ್ಯಕ್ರಮಕ್ಕೆ ರಾಜ್ಯದ ಎಲ್ಲ ಜಿಲ್ಲಾ ಹಾಗೂ ತಾಲೂಕಿನ ಪತ್ರಕರ್ತರು ಹಾಗೂ ರಾಜ್ಯಕಾರಣಿಗಳು , ಚಲನ ಚಿತ್ರ ನಟರು , ಕನ್ನಡಪರ ಸಂಘಟನೆಯ ಹೋರಾಟಗಾರರು ಪ್ರಗತಿಪರ ಚಿಂತಕರು ಪತ್ರಕರ್ತ ಸಾಹಿತಿಗಳು ಆಗಮಿಸಲಿದ್ದಾರೆ ಎಂದರು.

## ಆ.9ಕ್ಕೆ ಸಿಂಧನೂರಿನಲ್ಲಿ ವೆಲ್ಫೇರ್ ಪಾರ್ಟಿಯ ರಾಯಚೂರು-ಬಳ್ಳಾರಿ ಜಿಲ್ಲಾ ಸಮಾವೇಶ




ಸಿಂಧನೂರು: ಸಾಮಾಜಿಕ ನ್ಯಾಯಕ್ಕಾಗಿ ರಾಜಕೀಯ ಸಬಲೀಕರಣದ ಸಂದೇಶದೊಂದಿಗೆ ಅ.9ರಂದು ಸಿಂಧನೂರಿನಲ್ಲಿ ವೆಲ್ಫೇರ್ ಪಾರ್ಟಿ ಆಫ್ ಇಂಡಿಂ-ಯಾದ ರಾಯಚೂರು ಮತ್ತು ಬಳ್ಳಾರಿ ಜಿಲ್ಲೆಗಳ ಸಮಾವೇಶವನ್ನು ಹಮ್ಮಿ ಕೊಳ್ಳಲಾಗಿದೆ ಎಂದು ಜಿಲ್ಲಾ ಘಟಕದ ಅಧ್ಯಕ್ಷ ಶೇಖ್ ಫರೀದ್ ಉಯ್ತಿ ಹೇಳಿದರು.

ನಗರದ ಪತ್ರಿಕಾ ಭವನದಲ್ಲಿ ಸುದ್ದಿಗೋಷ್ಠಿ ನಡೆಸಿ ಮಾತನಾಡಿದ ಅವರು, ದೇಶವಾದ್ಯಂತ ಜನಪರ ರಾಜಕೀಯವನ್ನು ಕಟ್ಟುವ ಸಂಕಲ್ಪದೊಂದಿಗೆ ವೆಲ್ಫೇರ್ ಪಾರ್ಟಿ ಕಾರ್ಯ ನಿರ್ವಹಿಸುತ್ತಿದೆ. ಸಾಮಾಜಿಕ ನ್ಯಾಯ, ಸಂರಕ್ಷಣೆ, ರಾಜಕೀಯ ಸಬಲೀಕರಣಕ್ಕಾಗಿ ನಿರಂತರವಾಗಿ ಹೋರಾಟಗಳು, ಜನಜಾಗೃತಿ ಅಭಿಯಾನಗಳು, ಮತ್ತು ಸಮಾಜಮುಖಿ ಕಾರ್ಯಕ್ರಮಗಳನ್ನು ನಡೆಸುತ್ತಾ ಬಂದಿದೆ ಎಂದರು.

ಪ್ರಸ್ತುತ ದೇಶ ಎದುರಿಸುತ್ತಿರುವ ನಿರುದ್ಯೋಗ, ದ್ವೇಷ ರಾಜಕಾರಣ ಹಾಗೂ ಪ್ರಜಾಪ್ರಭಾತ ಸಂಸ್ಥೆಗಳ ಮೇಲೆ ಒತ್ತಡ, ಮೌಲ್ಯಾಧಾರಿತ ರಾಜಕೀಯವೇ ಶಾಶ್ವತ ಪರಿಹಾರ ಎಂಬ ನಂಬಿಕೆ ಪಕ್ಷ ಹೊಂದಿದೆ. ಇದೇ ಕಾರಣ-ಕ್ಕೆ ಸಮಾಜದ ಎಲ್ಲ ವರ್ಗದ ಜನರನ್ನು ರಾಜ-ಕೀಯವಾಗಿ ಜಾಗೃತಗೊಳಿಸಿ ಪ್ರಜಾಪ್ರಭುತ್ವದಲ್ಲಿ ಸಕ್ರಿಯವಾಗಿ ಪಾಲ್ಗೊಳ್ಳಲು ಪ್ರೇರೇಪಿಸುವ ಕಾರ್ಯ ಮಾಡಲಾಗುತ್ತಿದೆ. ನ್ಯಾಯಕ್ಕಾಗಿ ಹೋರಾಡುವ ವಿವಿಧ ಸಂಘಟನೆಗಳು, ರೈತರು, ಕಾರ್ಮಿಕರು, ವಿದ್ಯಾರ್ಥಿ-ಯುವಜನರು, ಮಹಿಳೆಯರು ಹಾಗೂ ಶೋಷಿತ ಸಮುದಾಯಗಳ ನ್ಯಾಯ-ಸಮ್ಮತ ಹೋರಾಟಗಳಿಗೆ ಸದಾ ನೈತಿಕ ಬೆಂಬಲ ನೀಡಿ, ಜನರ ಧ್ವನಿಯಾಗಿ ನಿಂತಿದೆ ಎಂದು ತಿಳಿಸಿದರು.

ಈ ನಿಟ್ಟಿನಲ್ಲಿ ಸಾಮಾಜಿಕ ನ್ಯಾಯಕ್ಕಾಗಿ ರಾಜಕೀಯ ಸಬಲೀಕರಣ ಎಂಬ ವಿಷಯದಡಿ ಅ.9ರಂದು ಬಳ್ಳಾರಿ ರಾಯಚೂರು ಜಿಲ್ಲೆಯ ಸಮಾವೇಶವು ಅಂದು ಸಂಜೆ 5 ಗಂಟೆಗೆ ನಗರದ ಸರ್ಕ್ಯೂಟ್ ಹೌಸ್‌ನಿಂದ ಮಿಲಾಪ್ ಶಾದಿಮಹಲ್ ವರೆಗೆ ಬೃಹತ್ ಬೈಕ್ ರ್ಯಾಲಿ ನಡೆಸಿ, ನಂತರ 7 ಗಂಟೆಗೆ ಬಹಿರಂಗ ಸಭೆ ನಡೆಯಲಿದೆ. ಜನರ ಬದುಕಿನಲ್ಲಿ ಬದಲಾವಣೆ ತರಬೇಕಾದರೆ ಉತ್ತಮ ವ್ಯಕ್ತಿಗಳಷ್ಟೇ ಸಂವಿಧಾನದ ಮೌಲ್ಯಗಳನ್ನು ನಂಬುವ ಪ್ರತಿಯೊಬ್ಬ ನಾಗರಿಕರು ವೆಲ್ಫೇರ್ ಪಾರ್ಟಿಯೊಂದಿಗೆ ಕೈಜೋಡಿಸಬೇಕು, ಸಾಮಾಜಿ-ಕ ನ್ಯಾಯಕ್ಕಾಗಿ ರಾಜಕೀಯ ಸಬಲೀಕರಣದ ಜನಾಂದೋಲನವನ್ನು ಮತ್ತಷ್ಟು ಬಲ ಪಡಿಸಬೇಕು. ಬುದ್ದಿಜೀವಿಗಳು, ಮಹಿಳೆಯರು, ರೈತರು, ಯುವಕರು, ಯುವತಿಯರು, ಭಾಗವಹಿಸಿ ಯಶಸ್ವಿಗೊಳಿಸಬೇಕು ಎಂದು ಮನವಿ ಮಾಡಿದರು.

ಈ ವೇಳೆ: ಜಿಲ್ಲಾ ಘಟಕದ ಉಪಾಧ್ಯಕ್ಷರಾದ ಗುಲಾವ ಮಷ್ಯದಸಾಬ್, ಮೆಹಬೂಬ್ ಖಾನ್ ಸಾವ್, ತಾಲ್ಲೂಕು ಘಟಕದ ಅಧ್ಯಕ್ಷ ಖಾಜಾಸಾಬ ಬುಡ್ಡಣ್ಣಿ, ಸದಸ್ಯ ಖಾದ್ರಿ ಜಾಮೀರ್ ಸಾಬ್, ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

## ಸಾಹಿತ್ಯ ಸಿಂಚನ

### ಆತ್ಮವಿಶ್ವಾಸದ ಹೆಜ್ಜೆ

ಆತ್ಮವಿಶ್ವಾಸದ ಹೆಜ್ಜೆ ಇಟ್ಟಾಗ,
ಅಸಾಧ್ಯವೂ ಸಾಧ್ಯವಾಗುತ್ತದೆ.
ಧೈರ್ಯದ ದೀಪ ಹೃದಯದಲ್ಲಿ ಹೊತ್ತಾಗ,
ಜೀವನದ ದಾರಿ ಬೆಳಗುತ್ತದೆ.

ಸೋಲು ಬಂದರೂ ಕುಗ್ಗದ ಮನ,
ಗೆಲುವಿನ ಕನಸನ್ನು ಬಿಡದು.
ಪ್ರತಿ ಹೆಜ್ಜೆಯಲ್ಲೂ ನಂಬಿಕೆ ಇದ್ದರೆ,
ಭವಿಷ್ಯದ ಬಾಗಿಲು ತೆರೆಯುತ್ತದೆ.

ಬಿರುಗಾಳಿಯ ಮಧ್ಯೆಯೂ ನಿಂತು,
ಧೈರ್ಯದಿಂದ ಮುಂದೆ ಸಾಗಬೇಕು.
ಕಷ್ಟಗಳೆಲ್ಲ ಪಾಠವಾಗಲಿ,
ಹೊಸ ಕನಸುಗಳು ಅರಳಬೇಕು.

ಸ್ವತಃ ಮೇಲೆ ನಂಬಿಕೆ ಇಟ್ಟರೆ,
ಸಾಧನೆ ನಮ್ಮನ್ನು ಹುಡುಕುತ್ತದೆ.
ಆತ್ಮವಿಶ್ವಾಸದ ಹೆಜ್ಜೆ ಇಟ್ಟವನಿಗೆ,
ಯಶಸ್ಸು ಸದಾ ಜೊತೆಯಾಗುತ್ತದೆ.

ಸೂರ್ಯನಂತೆ ಪ್ರಕಾಶಿಸೋಣ,
ನಕ್ಷತ್ರದಂತೆ ಮಿನುಗೋಣ.
ಆತ್ಮವಿಶ್ವಾಸದ ಬಲದಿಂದಲೇ,
ಜೀವನದ ಶಿಖರ ತಲುಪೋಣ.

## ರಾಯಚೂರು ಜಿಲ್ಲಾ ಅಂಗವಿಕಲ ಕಲ್ಯಾಣ ಅಧಿಕಾರಿಗಳಾದ ಸರಸ್ವತಿ ಕಾರುಣ್ಯಾಶ್ರಮಕ್ಕೆ ಭೇಟಿ ಪರಿಶೀಲನೆ

ನೈಜ್ಯ ದೆಸೆ ನ್ಯೂಸ್

ಸಿಂಧನೂರು: ಜಿಲ್ಲಾ ಅಂಗವಿಕಲ ಕಲ್ಯಾಣಾಧಿಕಾರಿ ವಿಕಲಚೇತನರ ಹಾಗೂ ಹಿರಿಯ ನಾಗರಿಕ ಸಬಲೀಕರಣ ಇಲಾಖೆ ರಾಯಚೂರು ಜಿಲ್ಲೆಯ ಕಲ್ಯಾಣ್ಯಾಧಿಕಾರಿಗಳಾದ ಸರಸ್ವತಿ.ಎಸ್. ಅವರು ಸಿಂಧನೂರು ನಗರದ ಒಳಬಳ್ಳಾರಿ ರಸ್ತೆಯಲ್ಲಿರುವ ಕರ್ನಾಟಕ ಸರ್ಕಾರದ ರಾಜ್ಯ ಪ್ರಶಸ್ತಿ ಪುರಸ್ಕೃತ ಸಂಸ್ಥೆಯಾದ ಶ್ರೀಮಠ ಸೇವಾ ಟ್ರಸ್ಟ್ (ರಿ)ಹರೇಟನೂರು ಅಡಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ಕಾರುಣ್ಯ ವೃದ್ಧಾಶ್ರಮ ಹಾಗೂ ವಯಸ್ಕರ ಬುದ್ಧಿಮಾಂದ್ಯ ಆಶ್ರಮಕ್ಕೆ ಭೇಟಿ ನೀಡಿ ಎಲ್ಲಾ ದಾಖಲೆಗಳನ್ನು ಪರಿಶೀಲಿಸಿ ಆಶ್ರಮದಲ್ಲಿನ ಎಲ್ಲಾ ಕೋಣೆಗಳನ್ನು ವೀಕ್ಷಿಸಿ ವೃದ್ಧರ ಹಾಗೂ ವಯಸ್ಕರ ಬುದ್ಧಿಮಾಂದ್ಯರ ಸಂಪೂರ್ಣ ಮಾಹಿತಿಯನ್ನು ತೆಗೆದುಕೊಂಡು ತಮ್ಮ ಬರಹದ ಅನಿಸಿಕೆಯ ಮೂಲಕ ಆಶ್ರಮದ ಸೇವೆಗೆ ಉತ್ತಮ ಪ್ರತಿಕ್ರಿಯೆ ವ್ಯಕ್ತಪಡಿಸಿದರು.

ಈ ಕಾರ್ಯಕ್ರಮದಲ್ಲಿ ಆಶ್ರಮದ ಸೇವಾಕರ್ತ ದಂಪತಿಗಳಾದ ಸುಜಾತ ಚನ್ನಬಸವ ಸ್ವಾಮಿ ದಂಪತಿಗಳು ಅಧಿಕಾರಿಗಳನ್ನು ಸನ್ಮಾನಿಸಿ ಗೌರವಿಸಿದರು. ನಂತರ



ಮಾತನಾಡಿದ ರಾಯಚೂರು ಜಿಲ್ಲಾ ಅಂಗವಿಕಲ ವಿಕಲಚೇತನರ ಮತ್ತು ಹಿರಿಯ ನಾಗರಿಕ ಸಬಲೀಕರಣ ಇಲಾಖೆಯ ಕಲ್ಯಾಣ್ಯಾಧಿಕಾರಿಗಳಾದ ಸರಸ್ವತಿ.ಎಸ್.ಮಾತನಾಡಿ ಕಾರುಣ್ಯ ಆಶ್ರಮದ ಈ ಸೇವೆಯು ನಮ್ಮ ಇಲಾಖೆಯ ಘನತೆ ಗೌರವವನ್ನು ಹೆಚ್ಚಿಸಿದೆ.

ಇಂತಹ ಸಂಸ್ಥೆ ನಮ್ಮ ಜಿಲ್ಲೆಯಲ್ಲಿ ಹುಟ್ಟಿರುವುದು ಜಿಲ್ಲಾಡಳಿತಕ್ಕೆ ಹೆಮ್ಮೆಯಾಗಿದೆ. ಮತ್ತು ವಿಶೇಷವಾಗಿ 2023 ನೇ ಇಸ್ವಿಯಲ್ಲಿ ನಮ್ಮ ರಾಜ್ಯದಲ್ಲಿ ಹಿರಿಯ ನಾಗರಿಕ ಸೇವಾ ಕ್ಷೇತ್ರದಲ್ಲಿ ಅತ್ಯುತ್ತಮ ಸೇವೆ ಸಲ್ಲಿಸಿದಂತಹ ಏಕೈಕ ಸಂಸ್ಥೆ ಎಂದು ಸ್ವೀಕರಿಸಿರುವ ಪ್ರಶಸ್ತಿ ನಮ್ಮ ಕಲ್ಯಾಣ ಕರ್ನಾಟಕಕ್ಕೆ ಘನತೆ ಗೌರವ ತಂದುಕೊಟ್ಟಿದೆ. ಇಂತಹ ಸಂಸ್ಥೆಗೆ ಮುಂದಿನ ದಿನಮಾನಗಳಲ್ಲಿ ನನ್ನ ಅಧಿಕಾರದ ಅವಧಿಯಲ್ಲಿ ಕಾನೂನಿನ ಚೌಕಟ್ಟಿನಲ್ಲಿ ಸರ್ಕಾರದ ಸೌಲಭ್ಯಗಳ ಮಾಹಿತಿ ಬಂದರೆ ಪ್ರಥಮವಾಗಿ ಸಿಂಧನೂರಿನಲ್ಲಿ ಕಾರುಣ್ಯ ಸಂಸ್ಥೆಗೆ ಒದಗಿಸಿಕೊಡುತ್ತೇನೆ.

ನಾನು ಅದೆಷ್ಟೋ ಆಶ್ರಮಗಳಿಗೆ ಭೇಟಿ ಕೊಟ್ಟಿದ್ದೇನೆ ಪರಿಶೀಲನೆ ಮಾಡಿದ್ದೇನೆ ಆದರೆ ಈ ಕಾರುಣ್ಯ ಸಂಸ್ಥೆಯ ಸೇವೆ ನೋಡಿದಾಗ ನನ್ನ ಮನಸ್ಸು ಒಂದು ಕ್ಷಣ ಸ್ತಬ್ಧವಾಯಿತು. ಇಂದಿನ ಈ ಭೇಟಿಯ ಸಂಪೂರ್ಣ ವಿವರವನ್ನು ಮಾನ್ಯ ಜಿಲ್ಲಾಧಿಕಾರಿಗಳಿಗೆ ಮಾಹಿತಿ ನೀಡುತ್ತೇನೆ. ಕಾರುಣ್ಯ ಆಶ್ರಮದ ನಿತ್ಯ ನಿರಂತರ ಸೇವೆಯ ಬಗ್ಗೆ ನಮ್ಮ ಇಲಾಖೆಗೆ ಮಾಹಿತಿ ನೀಡಿ ಮಾಡುತ್ತಿರುವ ಈ ಪುಣ್ಯ ಕಾರ್ಯಕ್ಕೆ ನಮ್ಮ ಇಲಾಖೆಯಿಂದ ಅಭಿನಂದನೆಗಳು ಎಂದು ಮಾತನಾಡಿ ಆಶ್ರಮದಲ್ಲಿನ ಎಲ್ಲಾ ಆಶ್ರಯದಾತರುಗಳಿಗೆ ಆತ್ಮಸ್ಥೈರ್ಯ ತುಂಬಿ ಬೇಟಿಯ ಸಮಯದಲ್ಲಿ ಹಲವಾರು ಅನಿಸಿಕೆಗಳನ್ನು ತಮ್ಮ ಬರಹದ ಮೂಲಕ ವ್ಯಕ್ತಪಡಿಸಿ ಸೇವೆಗೆ ಉತ್ತಮ ಪ್ರತಿಕ್ರಿಯೆ ವ್ಯಕ್ತಪಡಿಸಿದರು.

ಈ ಸಮಯದಲ್ಲಿ ಇಲಾಖೆಯ ವಾಹನ ಚಾಲಕರಾದ ವಲಿಬಾಷಾ. ಆಶ್ರಮದ ಕಾರ್ಯಧ್ಯಕ್ಷರಾದ ಡಾ.ಚನ್ನಬಸವ ಸ್ವಾಮಿ ಹಿರೇಮಠ ಸದಸ್ಯರಾದ ಸುಜಾತ ಹಿರೇಮಠ. ಸಿಬ್ಬಂದಿಗಳಾದ ಸಿದ್ದಯ್ಯ ಸ್ವಾಮಿ. ಮರಿಯಪ್ಪ. ಜ್ಯೋತಿ. ಬಸವ ಸ್ವಾಮಿ. ಅನೇಕರು ಉಪಸ್ಥಿತರಿದ್ದರು.

## ಕುಡಿಯುವ ನೀರಿನ ಸಮಸ್ಯೆಗೆ ತ್ವರಿತ ಸ್ಪಂದನೆ ನೀಡಬೇಕು: ಸಚಿವ ಡಾ. ಶರಣಪ್ರಕಾಶ್ ಪಾಟೀಲ್

## ಮಳೆಗಾಲದ ಸಮಸ್ಯೆಗಳ ಮೇಲ್ವಿಚಾರಣೆಗೆ ಅಧಿಕಾರಿಗಳಿಗೆ ಕಟ್ಟುನಿಟ್ಟಿನ ಸೂಚನೆ

ನೈಜ್ಯ ದೆಸೆ ನ್ಯೂಸ್

**ಯಾದಗಿರಿ: ಮಳೆಗಾಲದ ಹಿನ್ನೆಲೆಯಲ್ಲಿ ಜಿಲ್ಲೆಯಲ್ಲಿ ಸಾರ್ವಜನಿಕರಿಗೆ ಯಾವುದೇ ರೀತಿಯ ತೊಂದರೆ ಉಂಟಾಗದಂತೆ ಕುಡಿಯುವ ನೀರು ಸೇರಿದಂತೆ ಮೂಲಭೂತ ಸೌಲಭ್ಯಗಳ ನಿರ್ವಹಣೆಗೆ ಅಧಿಕಾರಿಗಳು ಹೆಚ್ಚಿನ ಆದ್ಯತೆ ನೀಡಬೇಕು ಎಂದು ಉನ್ನತ ವೈದ್ಯಕೀಯ ಶಿಕ್ಷಣ, ಕೌಶಲ್ಯಾಭಿವೃದ್ಧಿ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಡಾ. ಶರಣಪ್ರಕಾಶ್ ಪಾಟೀಲ್ ಅಧಿಕಾರಿಗಳಿಗೆ ಸೂಚನೆ ನೀಡಿದರು.**

ನಗರದ ಜಿಲ್ಲಾ ಪಂಚಾಯಿತಿ ಸಭಾಂಗಣದಲ್ಲಿ ಬುಧವಾರ ನಡೆದ ಬರ ಪರಿಸ್ಥಿತಿ, ಕುಡಿಯುವ ನೀರಿನ ವ್ಯವಸ್ಥೆ ಹಾಗೂ ಮಳೆಗಾಲದ ಸಿದ್ಧತೆ ಕುರಿತ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಜಿಲ್ಲೆಯಲ್ಲಿ ಕುಡಿಯುವ ನೀರಿನ ಸ ಮಸ್ಯೆ ಉಂಟಾಗುವ ಸಾಧ್ಯತೆ ಇರುವ ಗ್ರಾಮಗಳನ್ನು ಗುರುತಿಸಿ ಮುಂಚಿತವಾಗಿಯೇ ಅಗತ್ಯ ಕ್ರಮ ಕೈಗೊಳ್ಳಬೇಕು ಎಂದು ತಿಳಿಸಿದರು. ಜಿಲ್ಲಾ, ತಾಲೂಕು ಹಾಗೂ ಗ್ರಾಮ ಪಂಚಾಯಿತಿ ಮಟ್ಟದ ಅಧಿಕಾರಿಗಳು ತಮ್ಮ ವ್ಯಾಪ್ತಿಯ ಪ್ರದೇಶಗಳಲ್ಲಿ ನಿರಂತರವಾಗಿ ನಿಗಾ ವಹಿಸಿ, ಸಾರ್ವಜನಿಕರಿಂದ ಬರುವ ದೂರುಗಳಿಗೆ ತಕ್ಷಣ ಸ್ಪಂದಿಸುವಂತೆ ಸೂಚಿಸಿದ ಸಚಿವರು, ಕುಡಿಯುವ ನೀರಿನ ಮೂಲಗಳು, ಪೈಪ್‌ಲೈನ್‌ಗಳು,



ಮೋಟಾರ್‌ಗಳು ಹಾಗೂ ನೀರು ಸರಬರಾಜು ವ್ಯವಸ್ಥೆಗಳು ಸುಸ್ಥಿತಿಯಲ್ಲಿರುವಂತೆ ನೋಡಿಕೊಳ್ಳಬೇಕು ಎಂದರು.

ಮಳೆಗಾಲದಲ್ಲಿ ರಸ್ತೆ ಹಾನಿ, ಚರಂಡಿ ಸಮಸ್ಯೆ, ನೀರು ನಿಲ್ಲುವಿಕೆ, ವಿದ್ಯುತ್ ವ್ಯತ್ಯಯ ಹಾಗೂ ಸಾಂಕ್ರಾಮಿಕ ರೋಗಗಳ ಹರಡುವಿಕೆ ತಡೆಗಟ್ಟಲು ಆರೋಗ್ಯ, ಗ್ರಾಮೀಣಾಭಿವೃದ್ಧಿ, ನಗರ ಸ್ಥಳೀಯ ಸಂಸ್ಥೆಗಳು, ಲೋಕೋಪಯೋಗಿ, ನೀರು ಸರಬರಾಜು ಸೇರಿದಂತೆ ಎಲ್ಲ ಇಲಾಖೆಗಳು ಸಮನ್ವಯದಿಂದ ಕಾರ್ಯನಿರ್ವಹಿಸಬೇಕು ಎಂದು ನಿರ್ದೇಶಿಸಿದರು.

ಯಾವುದೇ ಗ್ರಾಮ ಅಥವಾ ನಗರ ಪ್ರದೇಶದಲ್ಲಿ ಕುಡಿಯುವ ನೀರಿನ ಕೊರತೆ ಕಂಡುಬಂದಲ್ಲಿ ಟ್ಯಾಂಕರ್‌ಗಳ ಮೂಲಕ ನೀರು ಪೂರೈಕೆ, ಕೊಳವೆಬಾವಿಗಳ ದುರಸ್ತಿ, ಪರ್ಯಾಯ ನೀರಿನ ಮೂಲಗಳ ಬಳಕೆ ಸೇರಿದಂತೆ ತುರ್ತು ಕ್ರಮಗಳನ್ನು ವಿಳಂಬವಿಲ್ಲದೆ ಕೈಗೊಳ್ಳಬೇಕು ಎಂದು ಹೇಳಿದರು.

ಅಧಿಕಾರಿಗಳು ಕಚೇರಿಗಳಲ್ಲೇ ಕುಳಿತುಕೊಳ್ಳದೆ ಕ್ಷೇತ್ರಕ್ಕೆ ಭೇಟಿ ನೀಡಿ ವಾಸ್ತವ ಪರಿಸ್ಥಿತಿಯನ್ನು ಪರಿಶೀಲಿಸಬೇಕು. ಸಾರ್ವಜನಿಕರಿಂದ ಬಂದ ದೂರುಗಳನ್ನು ಗಂಭೀರವಾಗಿ ಪರಿಗಣಿಸಿ ನಿಗದಿತ ಅವಧಿಯೊಳಗೆ ಪರಿಹಾರ ಒದಗಿಸಬೇಕು. ನಿರ್ಲಕ್ಷ್ಯ ಅಥವಾ ವಿಳಂಬ ಕಂಡುಬಂದರೆ ಸಂಬಂಧಪಟ್ಟ ಅಧಿಕಾರಿಗಳ ವಿರುದ್ಧ ಕ್ರಮ ಕೈಗೊಳ್ಳಲಾಗುವುದು ಎಂದು ಸಚಿವರು ಎಚ್ಚರಿಕೆ ನೀಡಿದರು.

ಮಳೆಗಾಲದಲ್ಲಿ ಸೇತುವೆಗಳು, ರಸ್ತೆಗಳು ಹಾಗೂ ಸರ್ಕಾರಿ ಕಟ್ಟಡಗಳ ಸುರಕ್ಷತೆಯ ಮೇಲೂ ವಿಶೇಷ ಗಮನ ಹರಿಸುವಂತೆ ಸೂಚಿಸಿದ ಅವರು, ಪ್ರವಾಹ ಅಥವಾ ಅತಿವೃಷ್ಟಿಯಿಂದ ತುರ್ತು ಪರಿಸ್ಥಿತಿ ಎದುರಾದರೆ ತಕ್ಷಣ ಪರಿಹಾರ ಕಾರ್ಯಾಚರಣೆ ಆರಂಭಿಸಲು ಅಗತ್ಯ ಯಂತ್ರೋಪಕರಣಗಳು ಹಾಗೂ ಸಿಬ್ಬಂದಿಯನ್ನು ಸನ್ನದ್ಧ ಸ್ಥಿತಿಯಲ್ಲಿ ಇರಿಸಬೇಕು ಎಂದು ತಿಳಿಸಿದರು.

ಸಭೆಯಲ್ಲಿ ವಿವಿಧ ಇಲಾಖೆಗಳ ಅಧಿಕಾರಿಗಳು ಜಿಲ್ಲೆಯ ಮಳೆಯ ಪ್ರಮಾಣ, ಕುಡಿಯುವ ನೀರಿನ ಲಭ್ಯತೆ, ಜಲಮೂಲಗಳ ಸ್ಥಿತಿ, ಟ್ಯಾಂಕರ್ ವ್ಯವಸ್ಥೆ, ಗ್ರಾಮವಾರು ಕೈಗೊಂಡಿರುವ ಮುನ್ನೆಚ್ಚರಿಕಾ ಕ್ರಮಗಳು ಹಾಗೂ ತುರ್ತು ಕಾರ್ಯಯೋಜನೆ ಕುರಿತು ಸಚಿವರಿಗೆ ಮಾಹಿತಿ ನೀಡಿದರು. ಅಧಿಕಾರಿಗಳಿಂದ ಮಾಹಿತಿ ಪಡೆದ ಸಚಿವರು ಸಾರ್ವಜನಿಕ ಹಿತಾಸಕ್ತಿಗೆ ಆದ್ಯತೆ ನೀಡಿ ವೇಗವಾಗಿ ಹಾಗೂ ಪರಿಣಾಮಕಾರಿಯಾಗಿ ಕಾರ್ಯನಿರ್ವಹಿಸುವಂತೆ ಸೂಚಿಸಿದರು.

## ಭಾರತೀಯ ಜನತಾ ಪಕ್ಷದ ಕಂಪ್ಲಿ ಮಂಡಲದ ಉಪಾಧ್ಯಕ್ಷರನ್ನಾಗಿ ಟಿ. ರಾಜಶೇಖರ್ ನೇಮಕ

ನೈಜ್ಯ ದೆಸೆ ನ್ಯೂಸ್

**ಬಳ್ಳಾರಿ / ಕಂಪ್ಲಿ.: ಪಟ್ಟಣದ ಬಿಜೆಪಿ ಕಚೇರಿಯಲ್ಲಿ ಟಿ ರಾಜಶೇಖರ್ ಇವರನ್ನು ಭಾರತೀಯ ಜನತಾ ಪಕ್ಷದ ಕಂಪ್ಲಿ ಮಂಡಲದ ಉಪಾಧ್ಯಕ್ಷರನ್ನಾಗಿ ಮಾಜಿ ಶಾಸಕರಾದ ಟಿ ಹೆಚ್ ಸುರೇಶ್ ಬಾಬು ಅವರ ಆದೇಶದ ಮೇರೆಗೆ ಬಿಜೆಪಿ ಮಂಡಲ ಅಧ್ಯಕ್ಷ ಸಿ.ಡಿ.ಮಹಾದೇವ ನೇಮಕ ಮಾಡಿದ್ದಾರೆ. ಪಕ್ಷದ ಶಿಸ್ತು, ತತ್ವ ಸಿದ್ಧಾಂತಗಳಿಗೆ ಬದ್ಧರಾಗಿ, ಪಕ್ಷವನ್ನು ತಳಮಟ್ಟದಿಂದ ಸಂಘಟಿಸುವಂತೆ ನೇಮಕ ಪತ್ರದಲ್ಲಿ ಸೂಚಿಸಿದ್ದಾರೆ.**



ಪದವಿ ಸ್ವೀಕರಿಸಿದ ನಂತರ ರಾಜಶೇಖರ್ ಮಾತನಾಡಿ ಪಕ್ಷದ ತತ್ವ ಸಿದ್ಧಾಂತಗಳಿಗೆ ಬದ್ಧನಾಗಿರುತ್ತೇನೆ ಹಾಗೂ ಪಕ್ಷವನ್ನು ಕಂಪ್ಲಿ ವಿಧಾನಸಭಾ ಕ್ಷೇತ್ರದಲ್ಲಿ ಹೆಚ್ಚಿನ ಮಟ್ಟದಲ್ಲಿ ಸಂಚರಿಸಿ ಸಂಘಟನೆ ಮಾಡುತ್ತೇನೆ ಎಂದು ತಿಳಿಸಿದರು ಈ ಸಂದರ್ಭದಲ್ಲಿ ಜಿಲ್ಲಾ ಉಪಾಧ್ಯಕ್ಷರಾದ ಅಳ್ಳಳ್ಳಿ ವೀರೇಶ್, ಮಂಡಲ ಅಧ್ಯಕ್ಷರಾದ ಸಿಡಿ ಮಹದೇವ್, ಹಿರಿಯ ಮುಖಂಡರಾದ ತಿಮ್ಮ ರೆಡ್ಡಿ , ಕಂಪ್ಲಿ ಮಂಡಲದ ಎಲ್ಲಾ ಹಿರಿಯ ಮುಖಂಡರು ಕಾರ್ಯಕರ್ತರು ಮತ್ತು ಎಲ್ಲಾ ಮೋರ್ಚಗಳ ಪದಾಧಿಕಾರಿಗಳು ಸೇರಿದಂತೆ ಅನೇಕರಿದ್ದರು.

ನೈಜ್ಯ ದೆಸೆ
ಕನ್ನಡ ದಿನಪತ್ರಿಕೆಯನ್ನು
ತಪ್ಪದೆ ಓದಿರಿ.

## ಆ.10ರಿಂದ ಬೆಂಗಳೂರಿನಲ್ಲಿ ಮಹ್ಮದ್ ಉಸ್ಮಾನ ಅಲಿ ಅವರ ಏಕವ್ಯಕ್ತಿ ಚಿತ್ರಕಲಾ ಪ್ರದರ್ಶನ: ಉಮೇಶ ಪತ್ತಾರ್

ನೈಜ್ಯ ದೆಸೆ ನ್ಯೂಸ್

**ಸಿಂಧನೂರು: ಸಿಂಧನೂರಿನ ವೃತ್ತಿಪರ ಚಿತ್ರಕಲಾವಿದರಾದ ಮಹ್ಮದ್ ಉಸ್ಮಾನ ಅಲಿ ಅವರ ಏಕವ್ಯಕ್ತಿ ಚಿತ್ರಕಲಾ ಪ್ರದರ್ಶನ 'ವರ್ಣ ವಿಲಾಸ' ಶೀರ್ಷಿಕೆಯಡಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಧನ ಸಹಾಯದೊಂದಿಗೆ ಆ.10, 11, 12, 12 ರಂದು ಮೂರು ದಿನಗಳ ಕಾಲ ಬೆಂಗಳೂರಿನ ಶೇಷಾದ್ರಿಪುರಂನಲ್ಲಿರುವ ಕರ್ನಾಟಕ ಚಿತ್ರಕಲಾ ಪರಿಷತ್ ಆರ್ಟ್ ಗ್ಯಾಲರಿ ನಂ-1ರಲ್ಲಿ ಹಮ್ಮಿಕೊಳ್ಳಲಾಗಿದೆ ಎಂದು ಚಿತ್ರಕಲಾವಿದ ಉಮೇಶ ಪತ್ತಾರ್ ತಿಳಿಸಿದರು.**

ಸುದ್ದಿಗೋಷ್ಠಿ ನಡೆಸಿ ಮಾತನಾಡಿದ ಅವರು, ಮಹ್ಮದ್ ಉಸ್ಮಾನ ಅಲಿ ಅವರು ವೃತ್ತಿಪರ ಚಿತ್ರಕಲಾವಿದ ರಾಗಿದ್ದು, ಸುಮಾರು 15 ವರ್ಷಗಳಿಂದ ಚಿತ್ರಕಲೆಯನ್ನೇ ನಂಬಿ




ಬದುಕುತ್ತಿದ್ದಾರೆ. ಇವರು ಬಿಡಿಸಿದ ಅನೇಕ ಕಲಾಕೃತಿಗಳು ವಿವಿಧ ಗ್ಯಾಲರಿಗಳಲ್ಲಿ ವೀಕ್ಷಣೆಗೆ ಇರಿಸಲಾಗಿದ್ದು, ಅನೇಕ ಕಲಾವಿದರಿಂದ ಪ್ರಶಂಸೆಗಳು ವ್ಯಕ್ತವಾಗಿವೆ. ಜೊತೆಗೆ ಹಲವು ಪ್ರಶಸ್ತಿಗಳು ಲಭಿಸಿವೆ. ಬೆಂಗಳೂರಿನಲ್ಲಿ ನಡೆಯುವ ಏಕ ವ್ಯಕ್ತಿ ಚಿತ್ರಕಲಾ ಪ್ರದರ್ಶನದಲ್ಲಿ ಇವರ 30ಕ್ಕೂ ಅಧಿಕ ಕಲಾಕೃತಿಗಳನ್ನು ಪ್ರದರ್ಶನಕ್ಕೆ ಇಡಲಾಗುವುದು. ಇದರಲ್ಲಿ ರಾಜ್ಯದ ಅನೇಕ ಕಲಾವಿದರು ಭಾಗವಹಿಸಲಿದ್ದಾರೆ. ಏಕವ್ಯಕ್ತಿ ಚಿತ್ರಕಲಾ ಪ್ರದರ್ಶನವನ್ನು ಅಂತರ್ ರಾಷ್ಟ್ರೀಯ ಚಿತ್ರಕಲಾವಿದರಾದ ವಾಜೀದ್ ಸಾಜೀದ್ ಮಾನ್ವಿ ಉದ್ಘಾಟಿಸುವರು. ಬೆಂಗಳೂರಿನ ಹಿರಿಯ ಚಿತ್ರಕಲಾವಿದರಾದ ಚಂದ್ರನಾಥ ಆಚಾರ್ಯ, ಬಾಬು ಜತ್ತರ್ಕ, ಅಂತರ್‌ರಾಷ್ಟ್ರೀಯ ಜಲವರ್ಣ ಕಲಾವಿದ ಕಾಂತರಾಜ್ ಎನ್, ಮುಖ್ಯಅತಿಥಿಗಳಾಗಿ ಆಗಮಿಸಲಿದ್ದಾರೆ. ಹೀಗಾಗಿ ಹೆಚ್ಚಿನ ಸಂಖ್ಯೆಯಲ್ಲಿ ಕಲಾವಿದರು ಪಾಲ್ಗೊಳ್ಳುವಂತೆ ಕೋರಿದರು. ಚಿತ್ರಕಲಾವಿದರಾದ ರಮೇಶ ಮಾನ್ವಿ, ಮಹ್ಮದ್ ಉಸ್ಮಾನ ಅಲಿ, ಮಲ್ಲಯ್ಯ ಕೇಂಭಾವಿ ಇದ್ದರು

## 80ನೇ ಸ್ವಾತಂತ್ರ್ಯ ದಿನಾಚರಣೆ ಅರ್ಥಪೂರ್ಣವಾಗಿ ಆಚರಿಸಿ: ತಹಶೀಲ್ದಾರ ಭೀಮರಾಯ ರಾಮಸಮುದ್ರ

ನೈಜ್ಯ ದೆಸೆ ನ್ಯೂಸ್

**ಮಾನ್ವಿ: ಆಗಸ್ಟ್ 15ರಂದು ನಡೆಯಲಿರುವ ದೇಶದ 80ನೇ ಸ್ವಾತಂತ್ರ್ಯ ದಿನಾಚರಣೆಯನ್ನು ಸಡಗರ, ಸಂಭ್ರಮ ಹಾಗೂ ಅರ್ಥಪೂರ್ಣವಾಗಿ ಆಚರಿಸುವ ನಿಟ್ಟಿನಲ್ಲಿ ತಾಲೂಕು ಆಡಳಿತದಿಂದ ಪಟ್ಟಣದ ತಹಶೀಲ್ದಾರ್ ಕಚೇರಿಯ ಸಭಾಂಗಣದಲ್ಲಿ ಪೂರ್ವಭಾವಿ ಸಭೆ ನಡೆಯಿತು.**

ಸಭೆಯಲ್ಲಿ ಮಾತನಾಡಿದ ತಹಶೀಲ್ದಾರ ಭೀಮರಾಯ ರಾಮಸಮುದ್ರ, ಆಗಸ್ಟ್ 15ರಂದು ತಾಲೂಕಿನ ಎಲ್ಲಾ ಸರ್ಕಾರಿ ಕಚೇರಿಗಳು, ರಾಷ್ಟ್ರೀಕೃತ ಹಾಗೂ ಖಾಸಗಿ ಬ್ಯಾಂಕ್‌ಗಳು, ಎನ್‌ಜಿಓಗಳು, ಶಿಕ್ಷಣ ಸಂಸ್ಥೆಗಳು ಸೇರಿದಂತೆ ಎಲ್ಲ ಸಾರ್ವಜನಿಕ ಸಂಸ್ಥೆಗಳಲ್ಲಿ ರಾಷ್ಟ್ರಧ್ವಜವನ್ನು ಧ್ವಜ ಸಂಹಿತೆಯ ನಿಯಮಾನುಸಾರ ಕಡ್ಡಾಯವಾಗಿ ಧ್ವಜಾರೋಹಣ ಮಾಡುವಂತೆ ಸೂಚಿಸಿದರು.

ಬೆಳಿಗ್ಗೆ 9 ಗಂಟೆಗೆ ತಹಶೀಲ್ದಾರ್ ಕಚೇರಿ ಆವರಣದಲ್ಲಿ ನಡೆಯುವ ಧ್ವಜಾರೋಹಣ ಕಾರ್ಯಕ್ರಮದಲ್ಲಿ ತಾಲೂಕಿನ ಎಲ್ಲಾ ಮಟ್ಟದ ಅಧಿಕಾರಿಗಳು ಕಡ್ಡಾಯವಾಗಿ ಭಾಗವಹಿಸಬೇಕು ಎಂದು ತಿಳಿಸಿದರು. ನಂತರ ತಾಲೂಕು ಕ್ರೀಡಾಂಗಣದಲ್ಲಿ ಶಾಸಕ ಜಿ. ಹಂಪಯ್ಯ ನಾಯಕ ಅವರ ಉಪಸ್ಥಿತಿಯಲ್ಲಿ ನಡೆಯುವ ಸಾರ್ವಜನಿಕ ಸ್ವಾತಂತ್ರ್ಯ ದಿನಾಚರಣೆ ಕಾರ್ಯಕ್ರಮದಲ್ಲಿ ಎಲ್ಲ ಇಲಾಖೆಗಳ ಅಧಿಕಾ-



ರಿಗಳು, ಸಾರ್ವಜನಿಕರು ಹಾಗೂ ಸಂಘ-ಸಂಸ್ಥೆಗಳ ಪದಾಧಿಕಾರಿಗಳು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸುವಂತೆ ಮನವಿ ಮಾಡಿದರು.

ತಾಲೂಕಿನ ಎಲ್ಲಾ ಸರ್ಕಾರಿ, ಅನುದಾನಿತ ಹಾಗೂ ಖಾಸಗಿ ಶಾಲೆಗಳ ವಿದ್ಯಾರ್ಥಿಗಳು ಕ್ರೀಡಾಂಗಣದಲ್ಲಿ ನಡೆಯುವ ಪಥಸಂಚಲನ ಹಾಗೂ ಸಾಂಸ್ಕೃತಿಕ ಕಾರ್ಯಕ್ರಮಗಳಲ್ಲಿ ಕಡ್ಡಾಯವಾಗಿ ಭಾಗವಹಿಸುವಂತೆ ಶಿಕ್ಷಣ ಇಲಾಖೆಯ ಮೂಲಕ ಸೂಚನೆ ನೀಡಲಾಗುವುದು ಎಂದು ತಿಳಿಸಿದರು.

ಈ ವೇಳೆ ವಿವಿಧ ಕ್ಷೇತ್ರಗಳಲ್ಲಿ ಸಾಧನೆ ಮಾಡಿದ ತಾಲೂಕಿನ ಗಣ್ಯರನ್ನು ತಾಲೂಕು ಆಡಳಿತದಿಂದ ಸಾರ್ವಜನಿಕ ಕಾರ್ಯಕ್ರಮದಲ್ಲಿ ಸನ್ಮಾನಿಸಲು ತೀರ್ಮಾನಿಸಲಾಯಿತು. ಮಳೆಗಾಲದ ವಾತಾವರಣವನ್ನು ಗಮನದಲ್ಲಿಟ್ಟುಕೊಂಡು ವಿದ್ಯಾರ್ಥಿಗಳ ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ಸೂಕ್ತ ರೀತಿಯಲ್ಲಿ ಆಯೋಜಿಸುವ ಬಗ್ಗೆ ಸಭೆಯಲ್ಲಿ ಚರ್ಚಿಸಲಾಯಿತು.

ಸಭೆಯಲ್ಲಿ ಗ್ರೇಡ್-2 ತಹಶೀಲ್ದಾರ ಅಬ್ದುಲ್ ವಾಹಿದ್, ಪುರಸಭೆ ಮುಖ್ಯಾಧಿಕಾರಿ ಪರಶುರಾಮ ದೇವಮಾನೆ, ತಾಲೂಕು ವೈದ್ಯಾಧಿಕಾರಿ ಡಾ. ಶರಣಬಸವ, ಪಿ.ಐ. ಸೋಮಶೇಖರ ಕೆಂಚರೆಡ್ಡಿ, ಜಿಲ್ಲಾ ಕಸಾಪ ಗೌರವ ಕಾರ್ಯದರ್ಶಿ ತಾಯಪ್ಪ ಬಿ. ಹೊಸೂರು, ಪತ್ರಕರ್ತರ ಸಂಘದ ಅಧ್ಯಕ್ಷ ಅಶೋಕ ತಡಕಲ್, ಕರ್ನಾಟಕ ಕಾರ್ಯನಿರತ ಪತ್ರಕರ್ತರ ಧ್ವನಿ ಸಂಘಟನೆಯ ಅಧ್ಯಕ್ಷ ಶಿವಕುಮಾರ್ ಚಲ್ಮಲ್, ಬಸವರಾಜ ನಿಲೋಗಲ್, ಮಲ್ಲನಗೌಡ ಬೈಲ್ ಮರ್ಚೆಡ್, ಶೇಖ್ ಮುಸ್ತಫಾ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು, ಸಮಾಜದ ಮುಖಂಡರು ಹಾಗೂ ಸಂಘ-ಸಂಸ್ಥೆಗಳ ಪದಾಧಿಕಾರಿಗಳು ಉಪಸ್ಥಿತರಿದ್ದರು.

## ಭೂಮಾನಂದ ಕೊಲೆ ಆರೋಪಿಗಳಿಗೆ ಮರಣದಂಡನೆ ಕೋರಿ ಚಾರ್ಜ್‌ಶೀಟ್ ಸಲ್ಲಿಸಿ: ಬಿಎಸ್‌ಪಿ ಆಗ್ರಹ

ನೈಜ್ಯ ದೆಸೆ ನ್ಯೂಸ್

**ರಾಯಚೂರು: ದೇವದುರ್ಗ ತಾಲೂಕಿನ ಹದ್ದಿನಾಳ ಗ್ರಾಮದಲ್ಲಿ ನಡೆದ ಬಿಎಸ್‌ಪಿ ಜಿಲ್ಲಾ ಉಸ್ತುವಾರಿ ಭೂಮಾನಂದ ಹದ್ದಿನಾಳ ಅವರ ಹತ್ಯೆ ಪ್ರಕರಣದ ಆರೋಪಿಗಳ ವಿರುದ್ಧ ಮರಣದಂಡನೆ ವಿಧಿಸುವಂತೆ ಚಾರ್ಜ್‌ಶೀಟ್ ಸಲ್ಲಿಸಬೇಕು. ಪ್ರಕರಣದಲ್ಲಿ ಗಟ್ಟೂರು ಪೊಲೀಸರ ನಿರ್ಲಕ್ಷ್ಯದ ಕುರಿತು ತನಿಖೆ ನಡೆಸಿ ಸಂಬಂಧಪಟ್ಟವರ ವಿರುದ್ಧ ಕ್ರಮ ಕೈಗೊಳ್ಳಬೇಕು ಎಂದು ಬಹುಜನ ಸಮಾಜ ಪಕ್ಷದ (ಬಿಎಸ್‌ಪಿ) ರಾಜ್ಯಾಧ್ಯಕ್ಷ ಎಂ. ಕೃಷ್ಣಮೂರ್ತಿ ಆಗ್ರಹಿಸಿದರು.**

ಗುರುವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಭೂಮಾನಂದ ಹದ್ದಿನಾಳ ಅವರ ಹತ್ಯೆಯ ಹಿಂದೆ ಎಸ್ಸಿ-ಎಸ್ಟಿ ಸಮುದಾಯಗಳ ನಡುವಿನ ಸಂಘರ್ಷದ ಹಿನ್ನೆಲೆ ಇರುವುದಾಗಿ ಆರೋಪಿಸಿದರು. ಜಿಲ್ಲೆಯಲ್ಲಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡ ಸಮುದಾಯಗಳ ನಡುವೆ ಸಂಘರ್ಷ ಹೆಚ್ಚುತ್ತಿರುವುದನ್ನು ತಡೆಯಲು ಸಾಮರಸ್ಯ ನಿರ್ಮಾಣದ ಅಗತ್ಯವಿದೆ ಎಂದು ಹೇಳಿದರು.

ಪ್ರಕರಣದ ಆರೋಪಿಗಳ ಪಟ್ಟಿಯಲ್ಲಿ ಎಂಟನೇ ಆರೋಪಿಯಾಗಿ



ನಮೂದಾಗಿರುವ ಭೀಮರಾಯ ಹದ್ದಿನಾಳ ಅವರಿಗೆ ಪ್ರಕರಣದೊಂದಿಗೆ ಯಾವುದೇ ಸಂಬಂಧ ಇಲ್ಲ. ಅವರು ಹಲವು ವರ್ಷಗಳಿಂದ ರಾಯಚೂರಿನಲ್ಲಿ ವಾಸವಾಗಿದ್ದು, ಕಳೆದ 35 ವರ್ಷಗಳಿಂದ ಮಾಧ್ಯಮ ಕ್ಷೇತ್ರದಲ್ಲಿ ಪ್ರಾಮಾಣಿಕವಾಗಿ ಸೇವೆ ಸಲ್ಲಿಸಿ ಸಮಾಜದಲ್ಲಿ ಗೌರವ ಗಳಿಸಿದ್ದಾರೆ. ಅವರ ವಿರುದ್ಧ ದುರುದ್ದೇಶದಿಂದ ಹೆಸರು ಸೇರಿಸಲಾಗಿದೆ ಎಂದು ದೂರಿದರು.

ಅಗತ್ಯವಿದ್ದರೆ ಸಿಡಿಆರ್, ಲೈವ್ ಲೊಕೇಷನ್ ಹಾಗೂ ಸಿಸಿಟಿವಿ ದೃಶ್ಯಾವಳಿಗಳನ್ನು ಪರಿಶೀಲಿಸಿ ಸತ್ಯಾಸತ್ಯತೆ ಖಚಿತಪಡಿಸಿಕೊಳ್ಳಬೇಕು. ಇದೇ ಪ್ರಕರಣದಲ್ಲಿ ಇನ್ನೂ ಹಲವು ನಿರಪರಾಧಿಗಳ ಹೆಸರನ್ನೂ ಸೇರಿಸಲಾಗಿದ್ದು, ಇದರಿಂದ ಅವರ ದೈನಂದಿನ ಜೀವನಕ್ಕೆ ತೀವ್ರ ತೊಂದರೆಯಾಗುತ್ತಿದೆ ಎಂದು ತಿಳಿಸಿದರು.

ಯಾರೋ ಮಾಡಿದ ತಪ್ಪಿಗೆ ಅಮಾಯಕರು ಶಿಕ್ಷೆಗೆ ಒಳಗಾಗಬಾರದು ಎಂಬುದು ಕಾನೂನಿನ ಮೂಲ ತತ್ವವಾಗಿದೆ. ಹೀಗಾಗಿ ನಿಜವಾದ ಆರೋಪಿಗಳನ್ನು ಹೊರತುಪಡಿಸಿ ದುರುದ್ದೇಶದಿಂದ ಸೇರಿಸಲಾದ ಎಲ್ಲ ಅಮಾಯಕರ ಹೆಸರನ್ನು ಎಫ್‌ಐಆರ್‌ನಿಂದ ಕೈಬಿಡಬೇಕು ಎಂದು ಒತ್ತಾಯಿಸಿದರು. ಇಲ್ಲದಿದ್ದರೆ ಈ ವಿಚಾರವು ಸಮುದಾಯಗಳ ನಡುವೆ ಅನಗತ್ಯ ಸಂಘರ್ಷಕ್ಕೆ ಕಾರಣವಾಗುವ ಸಾಧ್ಯತೆ ಇರುವುದರಿಂದ, ಪೊಲೀಸರು ನ್ಯಾಯಸಮ್ಮತ ಹಾಗೂ ನಿಷ್ಪಕ್ಷಪಾತ ತನಿಖೆ ನಡೆಸಿ ನಿರಪರಾಧಿಗಳಿಗೆ ನ್ಯಾಯ ಒದಗಿಸಬೇಕು ಎಂದು ಆಗ್ರಹಿಸಿದರು. ಹೈದರಾಬಾದ್ ಕರ್ನಾಟಕ ಪ್ರದೇಶ ವಾಲ್ಮೀಕಿ ನಾಯಕ ಸಂಘದ ವಿಭಾಗೀಯ ಕಾರ್ಯದರ್ಶಿ ಎನ್. ರಘುವೀರ ನಾಯಕ, ಜಿಲ್ಲಾ ಘಟಕದ ಅಧ್ಯಕ್ಷ ಮಲ್ಲಿಕಾರ್ಜುನ ನಾಯಕ, ರಾಮುನಾಯಕ, ನಾರಾಯಣ ನಾಯಕ, ತಾಯಪ್ಪ ನಾಯಕ, ರಂಗಸ್ವಾಮಿ ನಾಯಕ, ಗೋಪಲ ನಾಯಕ ಉಪಸ್ಥಿತರಿದ್ದರು.

### ಖಖಖಔ ಖಅಖಃ ನೇಮಕಾತಿ 2026 ? 244 ಗಆಅ ಮತ್ತು ಸ್ಟೆನೋಗ್ರಾಫರ್ ಹುದ್ದೆಗಳಿಗೆ ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಿ ಆಗಸ್ಟ್ 6, 2026

ISRO ICRB ನೇಮಕಾತಿ 2026: 244 ಗಆಅ ಮತ್ತು ಸ್ಟೆನೋಗ್ರಾಫರ್ ಹುದ್ದೆಗಳಿಗೆ ಅರ್ಜಿ ಸಲ್ಲಿಸಿ. ISRO ಕೇಂದ್ರೀಕೃತ ನೇಮಕಾತಿ ಮಂಡಳಿಯು (ICRB) ಆಗಸ್ಟ್ 2026ರ ಅಧಿಕೃತ ಅಧಿಸೂಚನೆಯ ಮೂಲಕ ಗಆಅ ಮತ್ತು ಸ್ಟೆನೋಗ್ರಾಫರ್ ಹುದ್ದೆಗಳನ್ನು ಭರ್ತಿ ಮಾಡಲು ಅರ್ಹ ಮತ್ತು ಆಸಕ್ತ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸಿದೆ. ತಿರುವನಂತಪುರಂ (ಕೇರಳ), ದೆಹಲಿ (ನವದೆಹಲಿ), ಹೈದರಾಬಾದ್ (ತೆಲಂಗಾಣ), ಬೆಂಗಳೂರು ಮತ್ತು ಹಾಸನ (ಕರ್ನಾಟಕ), ಅಹಮದಾಬಾದ್ (ಗುಜರಾತ್), ಗಜಪತಿ (ಒಡಿಶಾ) ಹಾಗೂ ಶ್ರೀಹ-ರಿಕೋಟಾ (ಆಂಧ್ರಪ್ರದೇಶ) ಪ್ರದೇಶಗಳಲ್ಲಿ ಉದ್ಯೋಗವನ್ನು ಬಯಸುವವರು ಈ ಅವಕಾಶವನ್ನು ಬಳಸಿಕೊಳ್ಳಬಹುದು. ಆಸಕ್ತ ಅಭ್ಯರ್ಥಿಗಳು 16-ಆಗಸ್ಟ್-2026 ರೊಳಗೆ ಅಥವಾ ಅಂದು ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಬಹುದು. ಅಧಿಕೃತ ವೆಬ್‌ಸೈಟ್: isro.gov.in

## ಸುಂಕೇಶ್ವರಹಾಳ ಗ್ರಾಮದಲ್ಲಿ ಭೂಮಾನಂದ ಹತ್ಯೆ ಪ್ರಕರಣ: ಆರೋಪಿಗಳ ಬಂಧನ ಹಾಗೂ ಕಠಿಣ ಶಿಕ್ಷೆಗೆ ಸಿಪಿಐ(ಎಂ) ಒತ್ತಾಯ

❏ ನೈಜ್ಯ ದೆಸೆ ನ್ಯೂಸ್

ದೇವದುರ್ಗ: ತಾಲೂಕಿನ ಸುಂಕೇಶ್ವರಹಾಳ ಗ್ರಾಮದಲ್ಲಿ ಭೂಮಾನಂದ ಹಂಚಿನಾಳ ಅವರನ್ನು ಹಾಡುಹಗಲೇ ಮಾರಕಾಸ್ತ್ರಗಳಿಂದ ಬರ್ಬರವಾಗಿ ಹತ್ಯೆಗೈದಿರುವ ಘಟನೆಗೆ ಸಿಪಿಐ(ಎಂ) ತಾಲೂಕು ಕಾರ್ಯದರ್ಶಿ ನರಸಣ್ಣ ನಾಯಕ ತೀವ್ರ ಖಂಡನೆ ವ್ಯಕ್ತಪಡಿಸಿದ್ದಾರೆ.



ಮಾಧ್ಯಮದವರೊಂದಿಗೆ ಮಾತನಾಡಿದ ಅವರು, ಈ ಹತ್ಯೆ ಅಮಾನವೀಯವಾಗಿದ್ದು, ನಾಗರಿಕ ಸಮಾಜವೇ ತಲೆತಗ್ಗಿಸುವಂತಹ ಕೃತ್ಯವಾಗಿದೆ ಎಂದು ಹೇಳಿದರು. ಹಾಡುಹಗಲೇ ಯಾವುದೇ ಭಯವಿಲ್ಲದೆ ವ್ಯಕ್ತಿಯೊಬ್ಬನನ್ನು ಹತ್ಯೆಗೈಯುವ ಮಟ್ಟಿಗೆ ಅಪರಾಧಿಗಳು ಧೈರ್ಯ ತೋರಿರುವುದು ಆತಂಕಕಾರಿ ಬೆಳವಣಿಗೆಯಾಗಿದ್ದು, ಇಂತಹ ಘಟನೆಗಳು ಸಾರ್ವಜನಿಕರಲ್ಲಿ ಭಯ ಮತ್ತು ಅಭದ್ರತೆಯ ವಾತಾವರಣವನ್ನು ಉಂಟುಮಾಡುತ್ತಿವೆ ಎಂದು ಆಕ್ರೋಶ ವ್ಯಕ್ತಪಡಿಸಿದರು. ವೈಯಕ್ತಿಕ ದ್ವೇಷ ಅಥವಾ ಯಾವುದೇ ಕಾರಣವಿದ್ದರೂ ಕಾನೂನನ್ನು ಕೈಗೆತ್ತಿಕೊಳ್ಳುವ ಹಕ್ಕು ಯಾರಿಗೂ ಇಲ್ಲ.

ಸಮಸ್ಯೆಗಳಿಗೆ ಕಾನೂನು ಮಾರ್ಗವೇ ಪರಿಹಾರವಾಗಿದ್ದು, ಕೊಲೆ ಯಾವುದೇ ಕಾರಣ-ಕ್ಕೂ ಸಮರ್ಥನೀಯವಲ್ಲ ಎಂದು ಅವರು ಹೇಳಿದರು. ಭೂಮಾನಂದ ಹಂಚಿನಾಳ ಹತ್ಯೆ ಪ್ರಕರಣದ ಎಲ್ಲಾ ಆರೋಪಿಗಳನ್ನು ಕೂಡಲೇ ಬಂಧಿಸಿ, ಕಾನೂನು ಪ್ರಕಾರ ಕಠಿಣ ಶಿಕ್ಷೆಗೆ ಒಳಪಡಿಸಬೇಕು ಎಂದು ಸಿಪಿಐ(ಎಂ) ಆಗ್ರಹಿಸಿದೆ. ವರದಿ: ಖಾಜಾ ಹುಸೇನ್ ಬಾಬಾ, ಜಾಲಹಳ್ಳಿ

## ಆಟೋ ಚಾಲಕರಿಗೆ ಸಮವಸ್ತ್ರ ವಿತರಣೆ

❏ ನೈಜ್ಯ ದೆಸೆ ನ್ಯೂಸ್

ಕಂಪ್ಲಿ: ಪಟ್ಟಣದ ಅಂಬೇಡ್ಕರ್ ವೃತ್ತ ಮತ್ತು ಬಳ್ಳಾರಿ ರಸ್ತೆಯ ಖಾಸಗಿ ಬಸ್ ನಿಲ್ದಾಣ ಬಳಿಯಲ್ಲಿ ಭಾರತೀಯ ಜನತಾ ಪಾರ್ಟಿ ಕಂಪ್ಲಿ ಮಂಡಲ ಅಧ್ಯಕ್ಷ ಸಿ.ಡಿ.ಮಹಾದೇವ ಅವರ ಜನ್ಮದಿನದ ಪ್ರಯುಕ್ತ ಅವರ ಸಮ್ಮುಖದಲ್ಲಿ ಆಟೋ ಚಾಲಕರಿಗೆ ಉಚಿತವಾಗಿ ಸಮವಸ್ತಗಳನ್ನು ಗುರುವಾರ ವಿತರಿಸಲಾಯಿತು.



ನಂತರ ಚಾಲಕ ಸುರೇಶ ಮಾತನಾಡಿ, ಕಂಪ್ಲಿ ಮಂಡಲ ಅಧ್ಯಕ್ಷರಾದ ಸಿ.ಡಿ.ಮಹಾದೇವ ಅವರು ಆಟೋ ಚಾಲಕರಿಗೆ ಉಚಿತವಗಿ ಸಮವಸ್ತ್ರ ನೀಡುವ ಮೂಲಕ ಸಮಾಜಮುಖಿ ಕಾರ್ಯವನ್ನು ಮಾಡುತ್ತಿದ್ದಾರೆ. ಇವ-ರಿಗೆ ಇನ್ನಷ್ಟು ಶಕ್ತಿ ನೀಡುವ ಜೊತೆಗೆ ಉನ್ನತ ಸ್ಥಾನ ಲಭಿಸಲಿ ಎಂದರು. ಇಲ್ಲಿ ಕೇಕ್ ಕತ್ತರಿಸಿ, ಸಿಹಿ ಹಂಚುವ ಮೂಲಕ ಅವರ ಸಮ್ಮುಖದಲ್ಲಿ ಹುಟ್ಟು ಹಬ್ಬ ಆಚರಿಸಿದರು. ಈ ಸಂದರ್ಭದಲ್ಲಿ ಮುಖಂಡರಾದ ಮೆಟ್ರಿ ಶಿವುಕುಮಾರ, ನಾಗಲಿಂಗ, ಮಹಾಂತೇಶ, ಜಡೆಪ್ಪ, ಆನಂದ, ಪುನೀತ್ ಚಾಲಕರಾದ ಸುರೇಶ, ಅನೀಫ್, ಮೈಲಾರಿ, ನಾಗರಾಜ, ವೆಂಕಟೇಶ, ಕಾರ್ತಿಕ, ಭಾರ್ಗವ, ಶಿವು, ನಾಗಲಿಂಗ ಸೇರಿದಂತೆ ಚಾಲಕರಿದ್ದರು.

## ಟಿಬಿ ಡ್ಯಾಂನ ಎಡದಂಡೆ 46ನೇ ಕಾಲುವೆ ರಿಪೇರಿ ತ್ವರಿತವಾಗಿ ಮಾಡಲು ಕೆ.ಕರಿಯಪ್ಪ ಒತ್ತಾಯ

❏ ನೈಜ್ಯ ದೆಸೆ ನ್ಯೂಸ್

ಸಿಂಧನೂರು: ಕಾರಟಗಿ ತಾಲೂಕಿನ ಮೈಲಾಪುರ, ಸಿಂಧನೂರು ತಾಲೂಕಿನ ದುರ್ಗಾಕ್ಯಾಂಪ್ ನಡುವಿನ ಟಿಬಿ ಡ್ಯಾಂನ ಎಡದಂಡೆಯ 46ನೇ ಕಾಲುವೆ ಕುಸಿದಿರುವ ಸ್ಥಳಕ್ಕೆ ಬಿಜೆಪಿ ಪಕ್ಷದ ಕೆ.ಕರಿಯಪ್ಪ, ಹಾಗೂ ಮಾಜಿ ಶಾಸಕ ಪ್ರತಾಪಗೌಡ ಪಾಟೀಲ್ ಭೇಟಿ ನೀಡಿ,



ಪರಿಶೀಲನೆ ನಡೆಸಿ, ರೈತರ ಹಿತಕಾಯಲು ಆದ-ಷ್ಟು ಬೇಗ ಕಾಲುವೆ ದುರಸ್ತಿಯ ಕಾಮಗಾರಿ ತುರ್ತಾಗಿ ಕೈಗೊಳ್ಳುವಂತೆ ಸಂಬಂಧಿಸಿದ ಅಧಿಕಾರಿಗಳಿಗೆ ಒತ್ತಡ ಹಾಕಿದರು. ಈ ವೇಳೆ: ನಗರ ಮಂಡಲ ಅಧ್ಯಕ್ಷ ಸಿದ್ರಾಮೇಶ ಮನ್ನಾಪೂರು, ಗ್ರಾಮೀಣ ಮಂಡಲ ಅಧ್ಯಕ್ಷ ಯಂಕೋಬ ನಾಯಕ ರಾಮತ್ನಾಳ, ಮಸ್ಕಿ ಮಂಡಲ ಅಧ್ಯಕ್ಷ ಶರಣಯ್ಯಸ್ವಾಮಿ ಸೊಪ್ಪಿಮಠ, ಮುತ್ತುಬರ್ಸಿ, ಬೀರಪ್ಪ, ನರಸಿಂಹ ಆಚಾರ್ಯರು, ನಿರುಪಾದಿ.ಕೆ, ಹಾಗೂ ಪಕ್ಷದ ಪದಾಧಿಕಾರಿಗಳು ಇದ್ದರು.

## ತಾಯಿಯ ಮೊದಲ ಹಾಲು ಮಗುವಿಗೆ ಅಮೃತಕ್ಕೆ ಸಮಾನ : ಬಸ್ಸಯ್ಯ ಉಪ ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿಗಳು

❏ ನೈಜ್ಯ ದೆಸೆ ನ್ಯೂಸ್

ಪೋತ್ನಾಳ: ಜಿಲ್ಲಾಡಳಿತ ಜಿಲ್ಲಾ ಪಂಚಾಯತ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ರಾಯಚೂರು ಹಾಗೂ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ ಸಿಂಧನೂರು.

ಪ್ರಾಥಮಿಕ ಆರೋಗ್ಯ ಕೇಂದ್ರ ರಾಗಲಪರವಿ ಇವರ ಸಂಯುಕ್ತ ಆಶ್ರಯದಲ್ಲಿ ರಾಷ್ಟ್ರೀಯ ಸ್ತನ್ಯಪಾನ ಸಪ್ತಾಹದ ಜಾಗೃತಿ ಮೂಡಿಸುವ ಕಾರ್ಯಕ್ರಮವನ್ನು ದಿದ್ದಿಗಿ ಅಂಗನವಾಡಿ ಕೇಂದ್ರದಲ್ಲಿ ಹಮ್ಮಿಕೊಳ್ಳಲಾಗಿತ್ತು ಕಾರ್ಯಕ್ರಮ ಕುರಿತು ಉಪ ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಬಸ್ಸಯ್ಯ ಅವರು. ತಾಯಂದಿರಿಗೆ ಸ್ತನ್ಯಪಾನದ ಮಹತ್ವದ ಕುರಿತು ಅರಿವು ಮೂಡಿಸಿದರು.

ಮಗುವಿನ ಜನನದ ಮೊದಲ ಒಂದು ಗಂಟೆಯೊಳಗೆ ಸ್ತನ್ಯಪಾನ ಆರಂಭಿಸುವುದು ಅತ್ಯಂತ ಅವಶ್ಯಕವಾಗಿದ್ದು, ಮೊದಲ ಆರು ತಿಂಗಳುಗಳವರೆಗೆ ಕೇವಲ ತಾಯಿಯ ಹಾಲನ್ನೇ ನೀಡಬೇಕು. ತಾಯಿಯ ಹಾಲು ಮಗುವಿನ ಸಂಪೂರ್ಣ ಬೆಳವಣಿಗೆಗೆ ಅಗತ್ಯವಾದ ಪೌಷ್ಟಿಕಾಂಶಗಳನ್ನು ಒದಗಿಸುವುದರ




ಜೊತೆಗೆ ರೋಗನಿರೋಧಕ ಶಕ್ತಿಯನ್ನು ಹೆಚ್ಚಿಸುತ್ತದೆ ತಾಯಿಯೇ ಎದೆ ಹಾಲು ಕುಡಿದ ಮಕ್ಕಳು ಒಳ್ಳೆಯ ಬುದ್ಧಿವತರಾಗಿರುತ್ತಾರೆ ತಾಯಿಯ ಎದೆ ಹಾಲಿನಲ್ಲಿ ಮಕ್ಕಳಿಗೆ ಬೇಕಾಗುವ ಉತ್ತಮ ಪೋಷಕಾಂಶಗಳು ಹೊಂದಿರುತ್ತದೆ. ತಾಯಿಯ ಎದೆಯಲು ಪರಿಶುದ್ಧ ಮತ್ತು ರೋಗಾಣು ರಹಿತವಾಗಿದ್ದು.

ಯಾವುದೇ ರೋಗ ಬರದಂತೆ ಮತ್ತು ಸೋಂಕು ಹರಡದಂತೆ ತಡೆಯುತ್ತದೆ ತಾಯಿಯ ಮೊದಲ ಎದೆಯಾಳು ಕೊಲೆಸ್ಟ್ರಾಂ ಅಂಶವನ್ನು ಹೊಂದಿದ್ದು ತಾಯಿಯೇ ಏದೇ ಹಾಲಿನೊಂದಿಗೆ ಮಗುವಿಗೆ ಆತ್ಮಸ್ಥೈರ್ಯ ದೃಢ ಮನಸ್ಸು ಏಕಾಗ್ರತೆಯ ಮನೋಬಲ ಎಲ್ಲಾ ಗುಣಗಳು ಬೆಳೆಯುತ್ತವೆ. ತಾಯಿಯ ಎದೆಹಾಲನ್ನು ಕುಡಿದ ಮಕ್ಕಳು ತಾಯಿಯೊಂದಿಗೆ ಆತ್ಮವಿಶ್ವಾಸ ಗೌರವ ಒಳ್ಳೆಯ ಗುಣಗಳು ಬೆಳೆಯುತ್ತವೆ ತಾಯಿ ಎದೆಯಾಲು ಚರ್ಮರೋಗ . ಉಸಿರಾಟದ ಸೋಂಕು . ಕೆಮ್ಮು ಅಸ್ತಮಾ ಮುಂತಾದ ಕಾಯಿಲೆಗಳನ್ನು ತಡೆಗಟ್ಟುತ್ತದೆ ತಾಯಿಯ ಎದೆಹಾಲು ಮಗುವಿನ ದೈಹಿಕ ಮತ್ತು ಮಾನಸಿಕ ಬೆಳವಣಿಗೆಯ ಉತ್ತಮ ಮಮತೆಯ ಪ್ರತೀಕವಾಗಿದೆ ಎಂದು ತಿಳಿಸಿದರು ನಂತರ ಮಾತನಾಡಿದ.

ಜಾಗೃತಿ ಮಹಿಳಾ ಸಂಘಟನೆಯ ಆರೋಗ್ಯಮ್ಮ ಅವರು ಸ್ತನ್ಯಪಾನದಿಂದ ಮಗುವಿಗೆ ಮಾತ್ರವಲ್ಲದೆ ತಾಯಿಯ ಆರೋಗ್ಯಕ್ಕೂ ಅನೇಕ ಪ್ರಯೋಜನಗಳಿದ್ದು, ತಾಯಿ ಮತ್ತು ಮಗುವಿನ ನಡುವೆ ಉತ್ತಮ ಬಾಂಧವ್ಯ ಬೆಳೆಸಲು ಸಹಕಾರಿಯಾಗುತ್ತದೆ . ಹಾಗೂ ಮಗುವಿಗೆ ತಾಯಿ ಎದೆ ಹಾಲು ಉಳಿಸುವುದ-ರಿಂದ ಕ್ಯಾನ್ಸರ್ ನಂತಹ ಮಾರಕ ಕಾಯಿಲೆ. ತಡೆಗಟ್ಟಬಹುದಾಗಿದೆ ಯಾವುದೇ ತಪ್ಪು ಕಲ್ಪನೆಗಳಿಗೆ ಒಳಗಾಗದೆ, ಆರೋಗ್ಯ ಇಲಾಖೆಯ ಮಾರ್ಗಸೂಚಿಗಳನ್ನು ಪಾಲಿಸಿ ಮಕ್ಕಳಿಗೆ ಸಮರ್ಪಕವಾಗಿ ಸ್ತನ್ಯಪಾನ ನೀಡಬೇಕು ಎಂದರು.

ಕಾರ್ಯಕ್ರಮದಲ್ಲಿ ಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿ ಬಾಲಪ್ಪ ನಾಯಕ ಜಾಗೃತಿ ಮಹಿಳಾ ಸಂಘಟನೆಯ ದೇವಿಪುತ್ರಪ್ಪ ಪ್ರಾಥಮಿಕ ಆರೋಗ್ಯ ಸುರಕ್ಷಾ ಅಧಿಕಾ-ರಿಗಳಾದ ಗಂಗಮ್ಮ. ಆರೋಗ್ಯ ನಿರೀಕ್ಷಣಾ ಅಧಿಕಾರಿಗಳಾದ ಪ್ರಕಾಶ ಅಂಗನವಾಡಿ ಕಾರ್ಯಕರ್ತೆಯರು ಆಶಾ ಕಾರ್ಯಕರ್ತೆರು . ತಾಯಂದಿರು ಭಾಗವಹಿಸಿ ಸ್ತನ್ಯಪಾನದ ಮಹತ್ವದ ಕುರಿತು ಮಾಹಿತಿ ಪಡೆದುಕೊಂಡರು.

## ಮಾಜಿ ಶಾಸಕ ಟಿ.ಹೆಚ್.ಸುರೇಶಬಾಬು ಅವರ 44ನೇ ಜನ್ಮ ದಿನಾಚರಣೆ ಅಂಗವಾಗಿ ವಿವಿಧ ಸಮಾಜಮುಖಿ ಕಾರ್ಯಕ್ರಮಗಳು

❏ ನೈಜ್ಯ ದೆಸೆ ನ್ಯೂಸ್

ಬಳ್ಳಾರಿ / ಕಂಪ್ಲಿ : ಪಟ್ಟಣದಲ್ಲಿ ಕಂಪ್ಲಿ ವಿಧಾನಸಭಾ ಕ್ಷೇತ್ರದ ಮಾಜಿ ಶಾಸಕ ಟಿ.ಹೆಚ್.ಸುರೇಶಬಾಬು ಅವರ 44ನೇ ಜನ್ಮ ದಿನಾಚರಣೆ ಅಂಗವಾಗಿ ವಿವಿಧ ಸಮಾಜಮುಖಿ ಕಾರ್ಯಗಳನ್ನು ಬಿಜೆಪಿ ಮಂಡಲ ಮತ್ತು ಬಿಜೆಪಿ ಮಹಿಳಾ ಘಟಕ ಹಾಗೂ ಮಹಾಶಕ್ತಿ ಕೇಂದ್ರ ನೇತೃತ್ವದಲ್ಲಿ ಜರುಗಿತು.

ಪಟ್ಟಣದ ಪೇಟೆಬಸವೇಶ್ವರ ದೇವಸ್ಥಾನದಲ್ಲಿ ವಿಶೇಷ ಪೂಜೆ ಸಲ್ಲಿಸಿ ನಂತರ ಸಮುದಾಯ ಆರೋಗ್ಯ ಕೇಂದ್ರದಲ್ಲಿ ರೋಗಿಗಳಿಗೆ ಹಾಲು, ಹಣ್ಣು, ಬ್ರೆಡ್‌ಗಳನ್ನು ವಿತರಿಸಿದ ಕ್ಷೇತ್ರ ಘಟಕದ ಪದಾಧಿಕಾರಿಗಳು ನಂತರ ಪಟ್ಟಣದ ಐತಿಹಾಸಿಕ ಪ್ರಭುಸ್ವಾಮಿಗಳವರ ಪ್ರೌಢ ಶಾಲೆ ಕಲ್ಮಠ ಶಾಲೆಯಲ್ಲಿ ಸಸಿಗಳನ್ನು ನೆಟ್ಟು ನೀರೆರೆದರು. ನಂತರ ಪಟ್ಟಣದ 4ನೇವಾರ್ಡ್ ಸರ್ಕಾರಿ ಕಿರಿಯ ಪ್ರಾಥ-ಮಿಕ ಶಾಲೆಯಲ್ಲಿ ವಿದ್ಯಾರ್ಥಿಗಳಿಗೆ ಎಲ್ಲಾ ಘಟಕದ ಪದಾಧಿಕಾರಿಗಳು ಪುಸ್ತಕ, ಲೇಖನಾ ಸಾಮಾಗ್ರಿಗಳು ಮತ್ತು ಸಿಹಿ ವಿತರಿಸುವ ಮೂಲಕ ಸಮಾಜಮುಖಿ



ಕಾರ್ಯಗಳನ್ನು ನೀಡುವ ಮೂಲಕ ಅತ್ಯಂತ ಅರ್ಥ ಪೂರ್ಣವಾಗಿ ಮಾಜಿ ಶಾಸಕ ಟಿ.ಹೆಚ್.ಸುರೇಶಬಾಬು ಅವರ 44ಜನ್ಮ ದಿನಾಚರಣೆಯನ್ನು ಆಚರಿಸಿದರು.

ಈ ವೇಳೆ ಮಾತನಾಡಿದ ಬಿಜೆಪಿ ಕ್ಷೇತ್ರಾಧ್ಯಕ್ಷ ಸಿ ಡಿ ಮಹಾದೇವ ಆರಂಭದಿಂದಲೂ ಅನೇಖ ಸಮಾಜ ಮುಖಿ ಕಾರ್ಯಗಳನ್ನು ಮಾಡುತ್ತಿದ್ದಾರೆ. ಕಂಪ್ಲಿ ವಿಧಾನಸಭಾ ಕ್ಷೇತ್ರದ ಮಾಜಿ ಶಾಸಕರು ಜನಪ್ರಿಯ ನಾಯಕ ಟಿ.ಹೆಚ್.ಸುರೇಶಬಾಬುರವರ ಜನ್ಮ ದಿನವನ್ನು ಬಿಜೆಪಿ ಪಕ್ಷದ ಕಾರ್ಯಕರ್ತರು ಆಡಂಬರದಿಂದ ಆಚರಿಸದೇ ಸಮಾಜಮುಖಿ ಕಾರ್ಯಗಳನ್ನು ಹಮ್ಮಿಕೊಂಡಿದ್ದೇವೆ ಎಂದರು. ಇದೇ ಸಂದರ್ಭದಲ್ಲಿ ವಿದ್ಯಾಧರ್ ಜಿಲ್ಲಾ ಉಪಾಧ್ಯಕ್ಷ ಅಳ್ಳಳ್ಳಿ ವೀರೇಶ್ ಹಾಗೂ ಸುದರ್ಶನ್ ರೆಡ್ಡಿ ಮುಂತಾದವರು ಮಾತನಾಡಿದರು..

ಈ ಸಂದರ್ಭದಲ್ಲಿ ಬಿಜೆಪಿ ಮಂಡಲ ಪ್ರಧಾನ ಕಾರ್ಯದರ್ಶಿ ಪ್ರಶಾಂತ್ , ಮಂಡಲ ಉಪಾಧ್ಯಕ್ಷ ಟಿ ರಾಜಶೇಖರ್ ,ಪುರಸಭೆ ಮಾಜಿ ಸದಸ್ಯರಾದ ಡಾ.ವಿ. ಎಲ್.ಬಾಬು, , ಎಸ್. ಎಂ.ನಾಗರಾಜಸ್ವಾಮಿ, ಸುದರ್ಶನರೆಡ್ಡಿ "ಮುಖಂಡರಾದ ಕೆ.ಹೊನ್ನೂರಸಾಬ್,ಮುರಳಿ ಮೋಹನರೆಡ್ಡಿ,,ಕಟ್ಟೆ ವಿಶ್ವನಾಥ್,ಬಿ.ದೇವೆಂದ್ರ, ಕೆ ಮಹೇಶ್ ಸಿ.ಎ.ಚೆನ್ನಪ್ಪ,ಈ- ರಣ್ಣ,ಬುಜ್ಜಿಕುಮಾರ, ವಿರುಪಾಕ್ಷಿ, ಮಹಿಳಾ ಮೋರ್ಚಾದ ಮಂಜುಳಾ, ಲಲಿತಮ್ಮ ಸೇರಿದಂತೆ ಅನೇಕ ಪಕ್ಷದ ಕಾರ್ಯಕರ್ತರು ಎಲ್ಲಾ ಮೂರ್ಛೆಗಳ ಸದಸ್ಯರು ಇತರರು ಇದ್ದರು.

## ಯುವಸೌರಭ-2026 ಶಿಕ್ಷಣಾರ್ಥಿಗಳಿಗೆ ನಾಡು-ನುಡಿ ಸಂಸ್ಕೃತಿಯ ಮಹಿಮೆ ತಿಳಿಸಿದ ನಿರ್ದೇಶಕಿ ಉತ್ತರಿದೇವಿ

❏ ನೈಜ್ಯ ದೆಸೆ ನ್ಯೂಸ್

ಮಾನ್ವಿ: ಕನ್ನಡ ಮತ್ತು ಸಂಸ್ಕೃತಿ ಇಲಾಖೆ ರಾಯಚೂರು ಹಾಗೂ ಶಾರದಾ ವಿದ್ಯಾನಿಕೇತನ ಶಿಕ್ಷಣ ಮಹಾವಿದ್ಯಾಲಯದ ಸಂಯುಕ್ತ ಆಶ್ರಯದಲ್ಲಿ ಶಿಕ್ಷಣ ಮಹಾವಿದ್ಯಾಲಯದ ಪ್ರಶಿಕ್ಷಣಾರ್ಥಿಗಳಿಗಾಗಿ ಯುವ ಸೌರಭ-2026 ಸಂಗೀತ ಮತ್ತು ಸಾಂಸ್ಕೃತಿಕ ಕಾರ್ಯಕ್ರಮವನ್ನು ಅತ್ಯಂತ ವಿಜೃಂಭಣೆಯಿಂದ ಆಯೋಜಿಸಲಾಗಿತ್ತು.

ಕಾರ್ಯಕ್ರಮವನ್ನು ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ನಿರ್ದೇಶಕರಾದಉತ್ತ-ರಿದೇವಿ ಉದ್ಘಾಟಿಸಿ ಮಾತನಾಡಿದರು. ಅವರು ಮಾತನಾಡಿ ನಮ್ಮ ಕನ್ನಡ ನಾಡು-ನುಡಿಯಲ್ಲಿರುವ ಶ್ರೀಮಂತ ಸಂಸ್ಕೃತಿ ಹಾಗೂ ಸಂಗೀತದ ಮಹಿಮೆಯನ್ನು ಪ್ರಶಿಕ್ಷಣಾರ್ಥಿಗಳು ಅರ್ಥ ಮಾಡಿಕೊಳ್ಳಬೇಕು. ಹಲವು ಸಾಂಸ್ಕೃತಿಕ ವೈಭವವನ್ನು ಹೊಂದಿರುವ ಈ ನಾಡನ್ನು ಪ್ರೀತಿಸುವುದರ ಜೊತೆಗೆ ಈಗ ಶಿಕ್ಷಕರಾಗಲು ತಯಾರಾಗುತ್ತಿರುವ ನೀವುಗಳು ಮುಂದೆ ಕಲಿಸಲು ಹೋಗುವ ವಿದ್ಯಾರ್ಥಿಗಳಿಗೆ ನಮ್ಮ ನಾಡಿನ ವೈಭವದ ಬಗ್ಗೆ ತಿಳಿಸಬೇಕು. ಮಕ್ಕಳನ್ನು ಉತ್ತಮ ಪ್ರಜೆಗಳನ್ನಾಗಿ ಬೆಳೆಸುವಲ್ಲಿ ನೀವು ಪ್ರಮುಖ ಪಾತ್ರ ವಹಿಸಬೇಕು ಎಂದು ಕರೆ ನೀಡಿದರು. ಕಾರ್ಯಕ್ರಮದ ಮುಖ್ಯ ಅತಿಥಿಗಳಾಗಿ ಆಗಮಿಸಿದ್ದ ಶಾರದಾ ಶಿಕ್ಷಣ ಸಂಸ್ಥೆಯ ಕಾರ್ಯದರ್ಶಿಗಳಾದ ಡಾ. ಹೃಂಧವಿ ಮಧುಸೂದನ್ ಗುಪ್ತಾಜೀ ಅವರು ಮಾತನಾಡಿ ನಮ್ಮ ಕನ್ನಡ ನಾಡಿನ ವೈಭವವನ್ನು ತೋರಿಸುವ ಮತ್ತು ಸಾಂಸ್ಕೃತಿ-ಕ ಚಟುವಟಿಕೆಗಳನ್ನು ಪ್ರದರ್ಶಿಸುತ್ತಿರುವ ಎಲ್ಲಾ ಕಲಾತಂಡಗಳಿಗೆ ಅಭಿನಂದನೆಗಳು.

ನೀವು ಬೋಧಿಸಲು ಹೋಗುವ ವಿದ್ಯಾರ್ಥಿಗಳಿಗೂ ನಮ್ಮ ನಾಡಿನ ವಿಶೇಷತೆ ಪರಂಪರೆಯ ಬಗ್ಗೆ ತಿಳಿಸುವ ಜವಾಬ್ದಾರಿ



ನಿಮ್ಮ ಮೇಲಿದೆ ಎಂದು ಹೇಳಿದರು. ಕಾರ್ಯಕ್ರಮದಲ್ಲಿ ಕಾಲೇಜಿನ ಪ್ರಾಚಾರ್ಯರಾದ ಡಾ. ಪರಮೇಶ್ವರಪ್ಪ ಗೋಪಶೆಟ್ಟಿ ಉಪ ಪ್ರಾಚಾರ್ಯರಾದ ವೀರಭದ್ರಯ್ಯ ಹಿರೇಮಠ ಸಂಗೀತ ಉಪನ್ಯಾಸಕರಾದ ಅಮರೇಶ ಸಾಲಿಮಠ ಮಹಾಂತಗೌಡ ಹಾಗೂ ಇತರ ಉಪನ್ಯಾಸಕರು ಉಪಸ್ಥಿತರಿದ್ದರು. ಕಾರ್ಯಕ್ರಮದಲ್ಲಿ ವಿವಿಧ ಕಾಲೇಜುಗಳಿಂದ ಆಗಮಿಸಿದ್ದ ಹಲವು ಕಲಾತಂಡಗಳು ನೃತ್ಯ ಸಂಗೀತ ನಾಟಕ ಸೇರಿದಂತೆ ವಿವಿಧ ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ಪ್ರದರ್ಶಿಸಿ ಸಭಿಕರ ಮನಗೆದ್ದರು. ಕಾರ್ಯಕ್ರಮವು ರಾಷ್ಟ್ರೀಯ ಭಾವೈಕ್ಯತೆ ಮತ್ತು ಸಾಂಸ್ಕೃತಿಕ ಪ್ರಜ್ಞೆಯನ್ನು ಬೆಳೆಸುವಲ್ಲಿ ಮಹತ್ವದ ಹೆಜ್ಜೆಯಾಗಿದೆ ಎಂದು ಅತಿಥಿಗಳು ಶ್ಲಾಘಿಸಿದರು.

## ಉಪ ಕಾಲುವೆಗಳಿಗೆ ಅಳವಡಿಸಿರುವ ಅಕ್ರಮ ಪೈಪ್‌ಗಳನ್ನು ತೆರವುಗೊಳಿಸಿ: ರೈತ ಸಂಘದ ಆಗ್ರಹ

❏ ನೈಜ್ಯ ದೆಸೆ ನ್ಯೂಸ್

ಮಾನ್ವಿ : ತಾಲೂಕಿನ ರೈತರ ವಿವಿಧ ಸಮಸ್ಯೆಗಳನ್ನು ಶೀಘ್ರ ಪರಿಹರಿಸುವಂತೆ ಒತ್ತಾಯಿಸಿ ಕರ್ನಾಟಕ ರಾಜ್ಯ ರೈತ ಸಂಘದ ತಾಲೂಕು ಘಟಕದ ವತಿಯಿಂದ ಪಟ್ಟಣದ ತಹಶೀಲ್ದಾರ್ ಕಚೇ-ರಿಯಲ್ಲಿ ತಹಶೀಲ್ದಾರ್ ಭೀಮರಾಯ ಬಿ. ರಾಮಸಮುದ್ರ ಅವರಿಗೆ ಮನವಿ ಸಲ್ಲಿಸಲಾಯಿತು.

ಈ ಸಂದರ್ಭದಲ್ಲಿ ಕರ್ನಾಟಕ ರಾಜ್ಯ ರೈತ ಸಂಘದ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಲಿಂಗರೆಡ್ಡಿ ಪಾಟೀಲ್ ಮಾತನಾಡಿ, ತಾಲೂಕಿನ ಗ್ರಾಮೀಣ ಭಾಗದಲ್ಲಿ ಸಮರ್ಪಕ ವಿದ್ಯುತ್ ಪೂರೈಕೆ ಇಲ್ಲದ ಕಾರಣ ರೈತರ ಪಂಪ್‌ಸೆಟ್‌ಗಳಿಗೆ ನಿರಂತರ ವಿದ್ಯುತ್ ದೊರೆಯುತ್ತಿಲ್ಲ. ಇದರಿಂದ ಬೆಳೆಗಳಿಗೆ ನೀರುಣಿಸಲು ಸಾಧ್ಯವಾಗದೆ ರೈತರು ಸಂಕಷ್ಟ ಎದುರಿಸುತ್ತಿದ್ದಾರೆ. ಜೆಸ್ಕಾಂ ಇಲಾಖೆ



ಅಧಿಕಾರಿಗಳು ರೈತರ ಪಂಪ್‌ಸೆಟ್‌ಗಳಿಗೆ ನಿರಂತರ ವಿದ್ಯುತ್ ಪೂರೈಕೆಗೆ ಅಗತ್ಯ ಕ್ರಮ ಕೈಗೊಳ್ಳಬೇಕು ಎಂದು ಒತ್ತಾಯಿಸಿದರು.

ರೈತರು ಮಾರಾಟ ಮಾಡಿದ ಜೋಳದ ಹಣವನ್ನು ತಕ್ಷಣವೇ ಅವರ ಬ್ಯಾಂಕ್ ಖಾತೆಗಳಿಗೆ ಜಮಾ ಮಾಡಬೇಕು. ತಾಲೂಕಿನ ಪಶು ಆಸ್ಪತ್ರೆಗಳಲ್ಲಿ ಖಾಲಿ ಇರುವ ಪಶುವೈದ್ಯರು ಹಾಗೂ ಸಿಬ್ಬಂದಿ ಹುದ್ದೆಗಳನ್ನು ಭರ್ತಿ ಮಾಡಬೇಕು. ಗ್ರಾಮೀಣ ಭಾಗದ ವಿದ್ಯಾರ್ಥಿಗಳಿಗೆ ಶಾಲೆಗೆ ತೆರಳಲು ಅನುಕೂಲವಾಗುವಂತೆ ಸಮರ್ಪಕ ಬಸ್ ಸೌಲಭ್ಯ ಕಲ್ಪಿಸಬೇಕು ಎಂದರು.

ಕರ್ನಾಟಕ ರಾಜ್ಯ ರೈತ ಸಂಘದ ರಾಜ್ಯ ಕಾರ್ಯದರ್ಶಿ ಸೂಗುರಯ್ಯ ಆರ್. ಎಸ್. ಮಠ ಮಾತನಾಡಿ, ತುಂಗಭದ್ರ ಎಡದಂಡೆ ಕಾಲುವೆ ವ್ಯಾಪ್ತಿಯ ಉಪ ಕಾಲುವೆಗಳಿಗೆ ಅಳವಡಿಸಿರುವ ಅಕ್ರಮ ಪೈಪ್‌ಗಳನ್ನು ಕೂಡಲೇ ತೆರವುಗೊಳಿಸಬೇಕು. ಕಾಲುವೆಗಳಲ್ಲಿನ ಸೀಲ್ಟ್ ತೆರವುಗೊಳಿಸಿ, ಸರ್ವಿಸ್ ರಸ್ತೆಗಳನ್ನು ದುರಸ್ತಿಪಡಿಸುವ ಮೂಲಕ ರೈತರಿಗೆ ನೀರಾವರಿ ವ್ಯವಸ್ಥೆ ಸುಗಮಗೊಳಿಸಬೇಕು ಎಂದು ಒತ್ತಾಯಿಸಿದರು.

ಈ ಸಂದರ್ಭದಲ್ಲಿ ಜಿಲ್ಲಾ ಕಾರ್ಯಾಧ್ಯಕ್ಷ ಬಸವರಾಜ ಮಾಲಿ ಪಾಟೀಲ್, ತಾಲೂಕು ಅಧ್ಯಕ್ಷ ಸಿದ್ದಯ್ಯಸ್ವಾಮಿ, ಅಮರೇಶ ಅಲ್ದಾಳ್, ಚಾಮರಸ ಜಾನೇಕಲ್, ತಾಲೂಕು ಕಾರ್ಯದರ್ಶಿ ಬಸವರಾಜ ತಡಕಲ್ ಸೇ-ರಿದಂತೆ ರೈತ ಸಂಘದ ಪದಾಧಿಕಾ-ರಿಗಳು ಹಾಗೂ ಸದಸ್ಯರು ಉಪಸ್ಥಿತರಿದ್ದರು.

## ಪಾಮನಕಲ್ಲೂರು ಸರ್ಕಾರಿ ಪ್ರೌಢ ಶಾಲೆಯಲ್ಲಿ ವಿದ್ಯಾರ್ಥಿಗಳಿಗೆ ಸಮಗ್ರ ಕಾನೂನು ಅರಿವು ಮತ್ತು ಮಾದಕ ವಸ್ತು ವಿರೋಧಿ ಜಾಗೃತಿ

❏ ನೈಜ್ಯ ದೆಸೆ ನ್ಯೂಸ್

ಕವಿತಾಳ: ವಿದ್ಯಾರ್ಥಿಗಳನ್ನು ಮಾದಕ ವ್ಯಸನ, ಅಪರಾಧ ಚಟುವಟಿಕೆಗಳು ಹಾಗೂ ಸಾಮಾಜಿ-ಕ ಅನಿಷ್ಟಗಳಿಂದ ದೂರವಿಟ್ಟು ಜವಾಬ್ದಾರಿಯುತ ನಾಗರಿಕರನ್ನಾಗಿ ರೂಪಿಸುವ ಉದ್ದೇಶದಿಂದ ಕವಿತಾಳ ಪೊಲೀಸ್ ಠಾಣೆ ವತಿಯಿಂದ ಠಾಣಾ ವ್ಯಾಪ್ತಿಯ ಪಾಮನಕಲ್ಲೂರು ಸರ್ಕಾರಿ ಪ್ರೌಢ ಶಾಲೆಯಲ್ಲಿ ವಿಶೇಷ ಜಾಗೃತಿ ಕಾರ್ಯಕ್ರಮ ಹಮ್ಮಿಕೊಳ್ಳಲಾಯಿತು.

ಕಾರ್ಯಕ್ರಮದಲ್ಲಿ ಕವಿತಾಳ ಪೊಲೀಸ್ ಠಾಣೆಯ ಪಿ.ಎಸ್.ಐ. ಅವರು ಮಾತನಾಡಿ, ಇತ್ತೀಚಿನ ದಿನಗಳಲ್ಲಿ ಮಾದಕ ವಸ್ತುಗಳ ಜಾಲವು ಯುವಜನತೆಯನ್ನು ಗುರಿಯಾಗಿಸಿಕೊಂಡು ವ್ಯಾಪಿಸುತ್ತಿದ್ದು, ವಿದ್ಯಾರ್ಥಿಗಳು ಅದರ ಬಗ್ಗೆ ಹೆಚ್ಚಿನ ಎಚ್ಚರಿಕೆ ವಹಿಸಬೇಕು ಎಂದು ಹೇಳಿದರು. ಮಾದಕ ವಸ್ತುಗಳ ವ್ಯಸನವು ದೈಹಿಕ ಮತ್ತು ಮಾನಸಿಕ



ಆರೋಗ್ಯವನ್ನು ಹದಗೆಡಿಸುವುದರ ಜೊತೆಗೆ ಶಿಕ್ಷಣ, ಕುಟುಂಬ ಮತ್ತು ಸಮಾಜದಲ್ಲಿನ ಗೌರವಕ್ಕೂ ಧಕ್ಕೆ ತರುತ್ತದೆ. ವ್ಯಸನದ ಕಾರಣದಿಂದ ಅನೇಕ ಯುವಕರು ಅಪರಾಧ ಚಟುವಟಿಕೆಗಳಲ್ಲಿ ತೊಡಗುವ ಪರಿಸ್ಥಿತಿ ನಿರ್ಮಾಣವಾಗುತ್ತದೆ. ಆದ್ದರಿಂದ ಯಾವುದೇ ವ್ಯಕ್ತಿಯ ಪ್ರಲೋಭನೆ, ಒತ್ತಡ ಅಥವಾ ಸ್ನೇಹಿತರ ಪ್ರೇರಣೆಗೆ ಒಳಗಾಗದೆ ಮಾದಕ ವಸ್ತುಗಳಿಂದ ಸಂಪೂರ್ಣ ದೂರವಿರಬೇಕು ಎಂದು ಸಲಹೆ ನೀಡಿದರು.

ಡ್ರಗ್ಸ್ ಹಾಗೂ ಎನ್.ಡಿ.ಪಿ.ಎಸ್. (ಓಚಿಡಿಛಿoಣiಛಿ ಆಡಿugs ಚಿಟಿಜ ಕsಥಿಛಿhoಣಡಿoಠಿiಛಿ ಖubsಣಚಿಟಿಛಿes) ಕಾಯ್ದೆಯಡಿ ಮಾದಕ ವಸ್ತುಗಳ ಉತ್ಪಾದನೆ, ಸಾಗಾಟ, ಮಾರಾಟ, ಖರೀದಿ, ಸಂಗ್ರಹ ಹಾಗೂ ಸೇವನೆ ಗಂಭೀರ ಶಿಕ್ಷಾರ್ಹ ಅಪರಾಧವಾಗಿದೆ. ಇಂತಹ ಚಟುವಟಿ-ಕೆಗಳ ಬಗ್ಗೆ ಮಾಹಿತಿ ದೊರೆತರೆ ತಕ್ಷಣ ಪೊಲೀಸ್ ಇಲಾಖೆಗೆ ತಿಳಿಸಿ ಸಮಾಜವನ್ನು ಸುರಕ್ಷಿತವಾಗಿಡಲು ಸಹಕರಿಸಬೇಕು ಎಂದು ತಿಳಿಸಿದರು.

ಸಂಚಾರ ನಿಯಮಗಳ ಕು-ರಿತು ಮಾತನಾಡಿದ ಅವರು, ಅಪ್ರಾಪ್ತ ವಯಸ್ಸಿನ ವಿದ್ಯಾರ್ಥಿಗಳು ಯಾವುದೇ ಕಾರಣಕ್ಕೂ ವಾಹನ ಚಲಾಯಿಸಬಾರದು. ದ್ವಿಚಕ್ರ ವಾಹನದಲ್ಲಿ ಪ್ರಯಾಣಿಸುವಾಗ ಹೆಲ್ಮೆಟ್ ಧರಿಸುವುದು, ಸಂಚಾರ ಚಿಹ್ನೆಗಳನ್ನು ಪಾಲಿಸುವುದು, ಅತಿವೇಗ ಹಾಗೂ ನಿರ್ಲಕ್ಷ್ಯ ಚಾಲನೆಯಿಂದ ದೂರವಿರುವುದು ಪ್ರತಿಯೊಬ್ಬರ ಕರ್ತವ್ಯವಾಗಿದೆ. ರಸ್ತೆ ಸುರಕ್ಷತಾ ನಿಯಮಗಳನ್ನು ಪಾಲಿಸುವುದರಿಂದ ಅಮೂಲ್ಯ ಜೀವಗಳನ್ನು ರಕ್ಷಿಸಬಹುದು ಎಂದು ಹೇಳಿದರು.

ಬಾಲ್ಯವಿವಾಹ ಕುರಿತು ಅರಿವು ಮೂಡಿಸಿದ ಅವರು, 18 ವರ್ಷಕ್ಕಿಂತ ಕಡಿಮೆ ವಯಸ್ಸಿನ ಬಾಲಕಿಯರು ಹಾಗೂ 21 ವರ್ಷಕ್ಕಿಂತ ಕಡಿಮೆ ವಯಸ್ಸಿನ ಬಾಲಕರ ವಿವಾಹ ಕಾನೂನುಬಾಹಿರವಾಗಿದೆ. ಬಾಲ್ಯವಿವಾಹದಿಂದ ಶಿಕ್ಷಣಕ್ಕೆ ಅಡ್ಡಿಯಾಗುವುದಲ್ಲದೆ, ಆರೋಗ್ಯ ಸಮಸ್ಯೆಗಳು, ಅಪೌಷ್ಟಿಕತೆ ಹಾಗೂ ಸಾಮಾಜಿಕ ಸಮಸ್ಯೆಗಳು ಉಂಟಾಗುತ್ತವೆ. ಇಂತಹ ಪ್ರಕರಣಗಳು ಕಂಡುಬಂದರೆ ಕೂಡಲೇ ಸಂಬಂಧಿಸಿದ ಅಧಿಕಾ-ರಿಗಳಿಗೆ ಮಾಹಿತಿ ನೀಡಬೇಕು ಎಂದು ತಿಳಿಸಿದರು.

ಪೋಕ್ಸೋ (POCSO) ಕಾಯ್ದೆಯ ಕುರಿತು ವಿವರಿಸಿದ ಅವರು, ಮಕ್ಕಳ ಮೇಲಿನ ಯಾವುದೇ ರೀತಿಯ ಲೈಂಗಿಕ ಕಿರುಕುಳ, ದೌರ್ಜನ್ಯ ಅಥವಾ ಶೋಷಣೆಯನ್ನು ತಡೆಗಟ್ಟಲು ಈ ಕಾಯ್ದೆ ಜಾರಿಯಲ್ಲಿದೆ.

## ಶಿಕ್ಷಣ ಮಾರ್ಗದರ್ಶಿ ವಿಶೇಷ

### ಮನೋವಿಜ್ಞಾನ (Psychology)

ಮನೋವಿಜ್ಞಾನ (Psychology) ಎಂದರೆ ಮಾನವನ ಮನಸ್ಸು, ಆಲೋಚನೆ, ಭಾವನೆ, ಕಲಿಕೆ, ವ್ಯಕ್ತಿತ್ವ ಮತ್ತು ನಡವಳಿಕೆಗಳನ್ನು ವೈಜ್ಞಾನಿಕವಾಗಿ ಅಧ್ಯಯನ ಮಾಡುವ ವಿಷಯ. ವ್ಯಕ್ತಿಗಳು ಏಕೆ ವಿಭಿನ್ನವಾಗಿ ಯೋಚಿಸುತ್ತಾರೆ, ಭಾವಿಸುತ್ತಾರೆ ಮತ್ತು ವರ್ತಿಸುತ್ತಾರೆ ಎಂಬುದನ್ನು ಅರ್ಥಮಾಡಿಕೊಳ್ಳಲು ಮನೋವಿಜ್ಞಾನ ಸಹಾಯ ಮಾಡುತ್ತದೆ.

**ಪ್ರಮುಖ ಮನೋವಿಜ್ಞಾನ ಕೋರ್ಸ್‌ಗಳು**

1. ಪದವಿ ಕೋರ್ಸ್‌ಗಳು (UG):
- BA in Psychology
- B.Sc in Psychology
– ಸಾಮಾನ್ಯವಾಗಿ 3?4 ವರ್ಷಗಳ ಅವಧಿಯ ಪದವಿ ಕಾರ್ಯಕ್ರಮಗಳು ಲಭ್ಯವಿರುತ್ತವೆ.
– 12ನೇ ತರಗತಿ/ಪಿಯುಸಿ ಉತ್ತೀರ್ಣರಾದ ನಂತರ ಪ್ರವೇಶ ಪಡೆಯಬಹುದು. ನಿರ್ದಿಷ್ಟ ಅರ್ಹತೆ ಸಂಸ್ಥೆಯ ನಿಯಮಗಳ ಮೇಲೆ ಅವಲಂಬಿತವಾಗಿರುತ್ತದೆ.

2. ಸ್ನಾತಕೋತ್ತರ ಕೋರ್ಸ್‌ಗಳು (PG):
- MA in Psychology
- M.Sc in Psychology
– ಸಾಮಾನ್ಯವಾಗಿ 2 ವರ್ಷಗಳ ಅವಧಿ.
– ಸಂಬಂಧಿತ ಪದವಿ ಹಾಗೂ ವಿಶ್ವವಿದ್ಯಾಲಯ ನಿಗದಿಪಡಿಸುವ ಅರ್ಹತೆ ಅಗತ್ಯವಾಗಬಹುದು.

3. ಡಿಪ್ಲೊಮಾ ಮತ್ತು ಪಿಜಿ ಡಿಪ್ಲೊಮಾ:
– ಕೌನ್ಸಿಲಿಂಗ್ ಸೈಕಾಲಜಿ
– ಕೈಗಾರಿಕಾ/ಸಂಸ್ಥಾ ಮನೋವಿಜ್ಞಾನ
– ಮಕ್ಕಳ ಮನೋವಿಜ್ಞಾನ
– ಶೈಕ್ಷಣಿಕ ಮನೋವಿಜ್ಞಾನ

ಮುಂತಾದ ಕ್ಷೇತ್ರಗಳಲ್ಲಿ ವಿಶೇಷ ಕೋರ್ಸ್‌ಗಳು ದೊರೆಯಬಹುದು.

4. ಸಂಶೋಧನಾ ಹಂತ:
ಸ್ನಾತಕೋತ್ತರ ಪದವಿಯ ನಂತರ ಅರ್ಹತೆಯ ಆಧಾರದ ಮೇಲೆ Ph.D. in Psychology ಮುಂತಾದ ಉನ್ನತ ಸಂಶೋಧನಾ ಕಾರ್ಯಕ್ರಮಗಳನ್ನು ಆಯ್ಕೆ ಮಾಡಬಹುದು.

ಮನೋವಿಜ್ಞಾನದ ಪ್ರಮುಖ ವಿಭಾಗಗಳು
- Clinical Psychology
- Counseling Psychology
- Educational Psychology
- Child Psychology
- Social Psychology
- Industrial & Organizational Psychology
- Developmental Psychology
- Cognitive Psychology
- Health Psychology
- Research Psychology

**ಉದ್ಯೋಗಾವಕಾಶಗಳು**

ಮನೋವಿಜ್ಞಾನ ಶಿಕ್ಷಣ ಪಡೆದವರು ತಮ್ಮ ವಿದ್ಯಾರ್ಹತೆ, ವಿಶೇಷ ತರಬೇತಿ ಮತ್ತು ಅಗತ್ಯವಿರುವ ವೃತ್ತಿಪರ ಮಾನ್ಯತೆಗಳ ಆಧಾರದ ಮೇಲೆ ವಿವಿಧ ಕ್ಷೇತ್ರಗಳಲ್ಲಿ ಕೆಲಸ ಮಾಡಬಹುದು:
– ಕೌನ್ಸಿಲಿಂಗ್ ಕ್ಷೇತ್ರ
– ಶಾಲೆ/ಕಾಲೇಜು ವಿದ್ಯಾರ್ಥಿ ಬೆಂಬಲ ಮತ್ತು ಮಾರ್ಗದರ್ಶನ
– ಮಾನವ ಸಂಪನ್ಮೂಲ (HR)
– ಪುನರ್ವಸತಿ ಸೇವೆಗಳು
– ಸಂಶೋಧನೆ
– ಶಿಕ್ಷಣ ಮತ್ತು ತರಬೇತಿ
– ಸಮುದಾಯ ಮತ್ತು ಸಾಮಾಜಿಕ ಸೇವಾ ಸಂಸ್ಥೆಗಳು
– ಆಸ್ಪತ್ರೆ ಹಾಗೂ ಆರೋಗ್ಯ ಸಂಸ್ಥೆಗಳ ಸಂಬಂಧಿತ ವಿಭಾಗಗಳು

Clinical Psychologist ಆಗಿ ವೃತ್ತಿಪರವಾಗಿ ಕಾರ್ಯನಿರ್ವಹಿಸಲು ಸಾಮಾನ್ಯ ಮನೋವಿಜ್ಞಾನ ಪದವಿಯಷ್ಟೇ ಸಾಕಾಗುವುದಿಲ್ಲ; ಭಾರತದಲ್ಲಿ ಅನ್ವಯಿಸುವ ನಿಯಮಗಳ ಪ್ರಕಾರ ಮಾನ್ಯತೆ ಪಡೆದ ವೃತ್ತಿಪರ ತರಬೇತಿ/ಅರ್ಹತೆ ಮತ್ತು ನೋಂದಣಿ ಅಗತ್ಯವಾಗಬಹುದು.

**ಉನ್ನತ ಶಿಕ್ಷಣ**

ಕರ್ನಾಟಕದಲ್ಲಿರುವ ವಿವಿಧ ವಿಶ್ವವಿದ್ಯಾಲಯಗಳು ಮತ್ತು ಕಾಲೇಜುಗಳಲ್ಲಿ ಮನೋವಿಜ್ಞಾನಕ್ಕೆ ಸಂಬಂಧಿಸಿದ ಪದವಿ, ಸ್ನಾತಕೋತ್ತರ ಮತ್ತು ಸಂಶೋಧನಾ ಕಾರ್ಯಕ್ರಮಗಳು ಲಭ್ಯವಿವೆ. ವಿದ್ಯಾರ್ಥಿಗಳು ಪ್ರವೇಶ ಪಡೆಯುವ ಮೊದಲು ಸಂಬಂಧಪಟ್ಟ ವಿಶ್ವವಿದ್ಯಾಲಯದ ಅಧಿಕೃತ ಅಧಿಸೂಚನೆಯಲ್ಲಿ ಅರ್ಹತೆ, ಕೋರ್ಸ್ ಅವಧಿ, ಪ್ರವೇಶ ವಿಧಾನ ಮತ್ತು ಮಾನ್ಯತೆಗಳನ್ನು ಪರಿಶೀಲಿಸುವುದು ಉತ್ತಮ.

**ಮನೋವಿಜ್ಞಾನ ಓದುವುದರಿಂದ ಆಗುವ ಪ್ರಯೋಜನ**

ಮನೋವಿಜ್ಞಾನವು ಕೇವಲ ಒಂದು ಉದ್ಯೋಗಮುಖಿ ವಿಷಯವಲ್ಲ; ಮಾನವನನ್ನು ಅರ್ಥಮಾಡಿಕೊಳ್ಳುವ ಜ್ಞಾನವನ್ನು ನೀಡುವ ಅಧ್ಯಯನ ಕ್ಷೇತ್ರವೂ ಹೌದು. ಸಂವಹನ ಕೌಶಲ್ಯ, ವಿಶ್ಲೇಷಣಾತ್ಮಕ ಚಿಂತನೆ, ಸಂಶೋಧನಾ ಸಾಮರ್ಥ್ಯ ಮತ್ತು ಜನರೊಂದಿಗೆ ಪರಿಣಾಮಕಾರಿಯಾಗಿ ಕೆಲಸ ಮಾಡುವ ಕೌಶಲ್ಯಗಳನ್ನು ಅಭಿವೃದ್ಧಿಪಡಿಸಲು ಇದು ನೆರವಾಗುತ್ತದೆ.
"ಮನಸ್ಸನ್ನು ಅರಿಯುವ ಅಧ್ಯಯನವೇ ಮನೋವಿಜ್ಞಾನ; ಮಾನವನ ನಡವಳಿಕೆಯನ್ನು ಅರ್ಥಮಾಡಿಕೊಳ್ಳುವ ದಾರಿಯೇ ಅದರ ಜ್ಞಾನ."

ನೈಜ್ಯ ದೆಸೆ
ಕನ್ನಡ ದಿನಪತ್ರಿಕೆಯನ್ನು ತಪ್ಪದೆ ಓದಿರಿ.

# 32ನೇ ವಿಶ್ವ ಆದಿವಾಸಿ ದಿನಾಚರಣೆ : ಯಶಸ್ವಿಗೊಳಿಸಿ : ಹೆಚ್.ಪಿ.ಶಿಕಾರಿ ರಾಮು

❑ ನೈಜ್ಯ ದೆಸೆ ನ್ಯೂಸ್

**ಬಳ್ಳಾರಿ / ಕಂಪ್ಲಿ : ಈ ಬಾರಿ ಹುಬ್ಬಳ್ಳಿ ಮತ್ತು ಧಾರವಾಡ ಜಿಲ್ಲಾಕೇಂದ್ರದ ನೆಹರು ಕ್ರೀಡಾಂಗಣದಲ್ಲಿ ಆ. 9ರ ಭಾನುವಾರದಂದು ಹರಣ ಶಿಕಾರಿ, ಪಾರ್ಧಿ ನೇತೃತ್ವದಲ್ಲಿ '32ನೇ ವಿಶ್ವ ಆದಿವಾಸಿ ದಿನಾಚರಣೆ ಆಚರಿಸುತ್ತಿದ್ದು, ಹೆಚ್ಚಿನ ಸಂಖ್ಯೆಯಲ್ಲಿ ಆದಿವಾದಿ ಬುಡಕಟ್ಟು ಸಮುದಾಯದವರು ಭಾಗವಹಿಸಿ, ಯಶಸ್ವಿಗೊಳಿಸಬೇಕೆಂದು ಎಂದು ಕರ್ನಾಟಕ ಆದಿವಾಸಿ ರಕ್ಷಣಾ ಪರಿಷತ್ ರಾಜ್ಯ ಸಂಘಟನಾ ಕಾರ್ಯದರ್ಶಿ ಹೆಚ್.ಪಿ.ಶಿಕಾರಿ ರಾಮು ಕರೆ ನೀಡಿದರು.**



ಪಟ್ಟಣದ ಶಿಕಾರಿ ಕಾಲೋನಿಯ ತುಳಜಾ ಭವಾನಿ ದೇವಸ್ಥಾನದಲ್ಲಿ ಗುರುವಾರ ಹಮ್ಮಿಕೊಂಡಿದ್ದ ಸಂಘಟನಾ ಸಭೆಯ ಅಧ್ಯಕ್ಷತೆವಹಿಸಿ ಮಾತನಾಡಿ, ಕರ್ನಾಟಕ ಆದಿವಾಸಿ ರಕ್ಷಣಾ ಪರಿಷತ್ತು ನೇತೃತ್ವದಲ್ಲಿ ವಿಶ್ವ ಸಂಸ್ಥೆಯು 1995ರಿಂದ ವಿಶ್ವ ಆದಿವಾಸಿ ದಿನಾಚರಣೆ ಆಚರಿಸುತ್ತಿದೆ. ಕಳೆದ 15 ವರ್ಷಗಳಿಂದ ಕರ್ನಾಟಕ ಆದಿವಾಸಿ ರಕ್ಷಣಾ ಪರಿಷತ್ತಿನಿಂದ ದಿನಾಚರಣೆ ವಿವಿಧೆಡೆ ಅರ್ಥಪೂರ್ಣವಾಗಿ ಆಚರಿಸಿಕೊಂಡು ಬರಲಾಗುತ್ತಿದೆ. ಕರ್ನಾಟಕ ರಾಜ್ಯದಲ್ಲಿ ಪರಿಶಿಷ್ಠ ಪಂಗಡದಲ್ಲಿ ಸುಮಾರು 50 ಬುಡಕಟ್ಟುಗಳಿವೆ.

2011ರ ಜನಗಣತಿಯ ಪ್ರಕಾರ ಸುಮಾರು 42,48,987 ಬುಡಕಟ್ಟುಗಳ ಜನಸಂಖ್ಯೆಗಳಿದೆ. ಡುಂಗ್ರಿ ಗರಾಸಿಯ, ಹಕ್ಕಿಪಿಕ್ಕಿ, ಕಾತಕರಿ, ಪಾರಿ, ಅಡ್ಡಿಚಿಂಚೇರ್, ಹರಣಶಿಕಾರಿ, ಪಾರ್ಧಿ, ರಾಜಗೊಂಡ ಬುಡಕಟ್ಟಿನವರು ಬದುಕಿಗಾಗಿ ಇಂದಿಗೂ ಅಲೆಮಾರಿ ಜೀವನ ಸಾಗಿಸುತ್ತಿರುವುದು ಶೋಚನೀಯವಾಗಿದೆ. ಬುಡಕಟ್ಟಿನ ಹಕ್ಕುಗಳ ಸಂರಕ್ಷಣೆಗಾಗಿ ಕರ್ನಾಟಕ ಆದಿವಾಸಿ ರಕ್ಷಣಾ ಪರಿಷತ್ತು ಅಧಿಕೃತವಾಗಿ ಜನ್ಮತಾಳಿದೆ. ರಾಜ್ಯದ ಎಲ್ಲ ಮೂಲ ಬುಡಕಟ್ಟುಗಳು ಸಮಾನವಾಗಿ ಸಂವಿಧಾನಬದ್ಧ ಹಕ್ಕನ್ನು ಪಡೆಯಬೇಕೆಂಬುದೇ ಪರಿಷತ್ತಿನ ಆಶಯವಾಗಿದೆ.

ಈ ನೆಲ, ಜಲ, ಕಾಡು ನಮ್ಮ ಜನ್ಮಸಿದ್ಧ ಹಕ್ಕಾಗಿದೆ. ಸಮುದಾಯದ ಸದಸ್ಯರಿಗೆ ಶಿಕ್ಷಣ, ಕೌಶಲ್ಯಾಭಿವೃದ್ಧಿ, ಉದ್ಯೋಗ, ಮಹಿಳಾ ಮತ್ತು ಯುವ ಸಬಲೀಕರಣ, ಆರೋಗ್ಯಜಾಗೃತಿ ಹಾಗೂ ಸರ್ಕಾರಿ ಕಲ್ಯಾಣ ಯೋಜನೆಗಳ ಸೌಲಭ್ಯಗಳನ್ನು ತಲುಪಿಸುವುದು ಸಂಘದ ಪ್ರಮುಖ ಉದ್ದೇಶವಾಗಿದೆ. ಸಂಘಟನೆಗಳ ಆಶಯದಂತೆ



32ನೇ ವಿಶ್ವ ಆದಿವಾಸಿ ದಿನಾಚರಣೆಗೆ ಸಚಿವರುಗಳು ಮತ್ತು ಶಾಸಕರುಗಳು, ಚಿಂತಕರು ಆಗಮಿಸಲಿದ್ದಾರೆ. ಆದ್ದರಿಂದ ಹೆಚ್ಚಿನ ಸಂಖ್ಯೆಯಲ್ಲಿ ಬುಡಕಟ್ಟು ಸಮುದಾಯದವರು ಭಾಗವಹಿಸಿ, ಯಶಸ್ವಿ ಮಾಡಿಕೊಡಬೇಕು ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಬಳ್ಳಾರಿ ಜಿಲ್ಲಾ ಹಕ್ಕಿಪಿಕ್ಕಿ ಅಭಿವೃದ್ಧಿ ಸಂಘದ ಅಧ್ಯಕ್ಷ ಹೆಚ್.ಪಿ.ಶ್ರೀಕಾಂತ, ಉಪಾಧ್ಯಕ್ಷ ಶಿಕಾರಿ ಬಾಬು, ಜಿಲ್ಲಾ ಹಕ್ಕಿಪಿಕ್ಕಿ ಪಾರ್ಧಿ, ಹರಣಾ ಶಿಕಾರಿ ಮಹಿಳಾ ಜಾಗೃತಿ ಸಂಘದ ಅಧ್ಯಕ್ಷೆ ಜಾನಕಿ, ಕಂಪ್ಲಿ ಹಕ್ಕಿಪಿಕ್ಕಿ ಯುವಕರ ಸಂಘದ ಅಧ್ಯಕ್ಷ ಹರಿ ಕೃಷ್ಣ, ಮುಖಂಡರಾದ ಗೋಪಿ, ಈರಣ್ಣ, ಹೆಚ್.ಪಿ.ಸೋಮ, ಗೋವಿಂದಪ್ಪ, ಅಂಜಿನಿ, ಗನ್ನುಸಿಂಗ್, ಗಂಗಪ್ಪ, ರಾಮು ಬಳ್ಳಾರಿ, ಈರಮ್ಮ ಬಳ್ಳಾರಿ, ಶಾರದಮ್ಮ, ರೇಣುಕಮ್ಮ, ಅಮೀನ್ ಕಟ್ಟಿಮನಿ, ಮೀನಾಕ್ಷಿ ಇದ್ದರು.

# ಭೂಮನಂದ ಹದ್ದಿನಾಳ ಕುಟುಂಬಕ್ಕೆ ನ್ಯಾಯಕ್ಕೆ ಆಗ್ರಹ; ರಸ್ತೆ ತಡೆ ನಡೆಸಿ ತಹಶೀಲ್ದಾರರಿಗೆ ಮನವಿ

## ಮಸ್ಕಿಯಲ್ಲಿ ಹೆದ್ದಾರಿ ತಡೆದು ಭೂಮನಂದ ಹತ್ಯೆ ಖಂಡಿಸಿ ಪ್ರತಿಭಟನೆ ಕಠಿಣ ಕ್ರಮಕ್ಕೆ ಆಗ್ರಹ

❑ ನೈಜ್ಯ ದೆಸೆ ನ್ಯೂಸ್

**ಮಸ್ಕಿ: ದೇವದುರ್ಗ ತಾಲೂಕಿನ ಸುಂಕೇಶ್ವರಹಾಳ ಗ್ರಾಮದಲ್ಲಿ ಮಾದಿಗ ಸಮುದಾಯದ ಯುವಕ, ಬಹುಜನ ಸಮಾಜ ಪಕ್ಷದ ಕಾರ್ಯಕರ್ತ ಭೂಮನಂದ ಹದ್ದಿನಾಳ ಅವರ ಬರ್ಬರ ಹತ್ಯೆಯನ್ನು ಖಂಡಿಸಿ ಮಸ್ಕಿ ದಲಿತ ಸಂಘಟನೆಗಳ ಒಕ್ಕೂಟದ ನೇತೃತ್ವದಲ್ಲಿ ಗುರುವಾರ ಪ್ರತಿಭಟನೆ ನಡೆಯಿತು.**

ಮಸ್ಕಿ ಪಟ್ಟಣದ ಹಳೆ ಬಸ್ ನಿಲ್ದಾಣದಲ್ಲಿರುವ ಡಾ. ಬಿ.ಆರ್. ಅಂಬೇಡ್ಕರ್ ಪ್ರತಿಮೆ ಮುಂಭಾಗ ದಲಿತ ಸಂಘಟನೆಗಳ ಒಕ್ಕೂಟದಿಂದ ಪ್ರತಿಭಟನೆ ನಡೆಸಿದ ಪ್ರತಿಭಟನಾಕಾರರು ಭೂಮನಂದ ಹದ್ದಿನಾಳ ಅವರ ಭಾವಚಿತ್ರಕ್ಕೆ ನಮನ ಸಲ್ಲಿಸಿ, ಜಾತಿ ದ್ವೇಷದ ಹೆಸರಿನಲ್ಲಿ ನಡೆಯುತ್ತಿರುವ ದೌರ್ಜನ್ಯಗಳ ವಿರುದ್ಧ ಆಕ್ರೋಶ ವ್ಯಕ್ತಪಡಿಸಿದರು. ಹೆದ್ದಾರಿ ರಸ್ತೆ ತಡೆದು ರಾಜ್ಯ ಸರ್ಕಾರ ಹಾಗೂ ಪೊಲೀಸ್ ಇಲಾಖೆಯ ವಿರುದ್ಧ ಘೋಷಣೆಗಳನ್ನು ಕೂಗಿದರು.



ಈ ಸಂದರ್ಭದಲ್ಲಿ ಪ್ರತಿಭಟನೆಯನ್ನು ಉದ್ದೇಶಿಸಿ ದಲಿತ ಮುಖಂಡರಾದ ದಾನಪ್ಪ ನಿಲೋಗಲ್, ದೊಡ್ಡಪ್ಪ ಮುರಾರಿ,ಮೌನೇಶ ಮುರಾರಿ, ಮಲ್ಲಪ್ಪ ಗೋನಾಳ, ಬಸವರಾಜ ಬಾಗಲವಾಡ ಹಾಗೂ ಬಾಲಸ್ವಾಮಿ ಜಿನ್ನಾಪುರ,ಪ್ರಶಾಂತ ನಿಲೋಗಲ್,ಮಾತನಾಡಿ, ರಾಜ್ಯದಲ್ಲಿ ದಲಿತ ಸಮುದಾಯದ ಮೇಲೆ ನಿರಂತರವಾಗಿ ನಡೆಯುತ್ತಿರುವ ದೌರ್ಜನ್ಯಗಳು ಮತ್ತು ಜಾತಿ ದ್ವೇಷದ ಹತ್ಯೆಗಳು ನಾಗರಿಕ ಸಮಾಜಕ್ಕೆ ಕಳವಳಕಾರಿ ಬೆಳವಣಿಗೆಯಾಗಿವೆ ಎಂದು ಆತಂಕ ವ್ಯಕ್ತಪಡಿಸಿದರು. ಭೂಮನಂದ ಹದ್ದಿನಾಳ ಹತ್ಯೆ ಪ್ರಕರಣವನ್ನು ರಾಜ್ಯ ಸರ್ಕಾರ ಹಾಗೂ ಗೃಹ ಇಲಾಖೆ ಅತ್ಯಂತ ಗಂಭೀರವಾಗಿ ಪರಿಗಣಿಸಿ, ಎಲ್ಲ ಆರೋಪಿಗಳನ್ನು ಕೂಡಲೇ ಬಂಧಿಸಿ ಕಾನೂನಿನಡಿ ಕಠಿಣ ಶಿಕ್ಷೆಗೆ ಗುರಿಪಡಿಸಬೇಕು.

ಪ್ರಕರಣದ ತ್ವರಿತ ತನಿಖೆ ನಡೆಸಿ ತಪ್ಪಿತಸ್ಥರಿಗೆ ಉದಾಹರಣೆಯಾಗುವಂತಹ ಶಿಕ್ಷೆ ವಿಧಿಸಬೇಕು. ಮೃತರ ಕುಟುಂಬಕ್ಕೆ ಸೂಕ್ತ ಪರಿಹಾರ, ಕುಟುಂಬದ ಒಬ್ಬ ಸದಸ್ಯರಿಗೆ ಸರ್ಕಾರಿ ಉದ್ಯೋಗ ನೀಡಬೇಕು ಎಂದು ಒತ್ತಾಯಿಸಿದರು.

ನಂತರ ತಹಶೀಲ್ದಾರರ ಮೂಲಕ ರಾಜ್ಯ ಸರ್ಕಾರಕ್ಕೆ ಮನವಿ ಸಲ್ಲಿಸಿ, ಜಾತಿ ದೌರ್ಜನ್ಯಗಳನ್ನು ತಡೆಗಟ್ಟಲು ಪರಿಣಾಮಕಾರಿ ಕ್ರಮಗಳನ್ನು ಕೈಗೊಳ್ಳಬೇಕು ಹಾಗೂ ಸಂವಿಧಾನ ನೀಡಿರುವ ಸಾಮಾಜಿಕ ನ್ಯಾಯ ಮತ್ತು ಸಮಾನತೆಯ ಮೌಲ್ಯಗಳನ್ನು ಕಟ್ಟುನಿಟ್ಟಾಗಿ ಜಾರಿಗೊಳಿಸಬೇಕು ಎಂದು ಆಗ್ರಹಿಸಿದರು. ಪ್ರತಿಭಟನೆಯಲ್ಲಿ ದಲಿತ ಸಂಘಟನೆಗಳ ಪದಾಧಿಕಾರಿಗಳು, ವಿವಿಧ ಪ್ರಗತಿಪರ ಸಂಘಟನೆಗಳ ಮುಖಂಡರು, ದಲಿತ ಬಂಧುಗಳು ಹಾಗೂ ಸಾರ್ವಜನಿಕರು ಭಾಗವಹಿಸಿದ್ದರು.

# ಸರಕಾರಿ ಪ್ರೌಢ ಶಾಲೆ ಹೊಗರನಾಳದಲ್ಲಿ ವಿದ್ಯಾರ್ಥಿಗಳಿಗೆ ಕಾನೂನು ಅರಿವು ಜಾಗೃತಿ ಕಾರ್ಯಕ್ರಮ

❑ ನೈಜ್ಯ ದೆಸೆ ನ್ಯೂಸ್

**ತುರ್ವಿಹಾಳ: ತುರ್ವಿಹಾಳ ಪೊಲೀಸ್ ಠಾಣಾ ವ್ಯಾಪ್ತಿಯ ಸರಕಾರಿ ಪ್ರೌಢ ಶಾಲೆ ಹೊಗರನಾಳದಲ್ಲಿ ವಿದ್ಯಾರ್ಥಿಗಳಿಗಾಗಿ ಜಾಗೃತಿ ಕಾರ್ಯಕ್ರಮವನ್ನು ಆಯೋಜಿಸಲಾಯಿತು.**

ಈ ಸಂದರ್ಭದಲ್ಲಿ ತುರ್ವಿಹಾಳ ಪೊಲೀಸ್ ಠಾಣೆಯ ಪಿ.ಎಸ್.ಐ. ಅವರು ವಿದ್ಯಾರ್ಥಿಗಳಿಗೆ ಮಾದಕ ವಸ್ತುಗಳ ಸೇವನೆಯಿಂದಾಗುವ ದುಷ್ಪರಿಣಾಮಗಳ ಕುರಿತು ವಿವರವಾಗಿ ತಿಳಿಸಿ, ಡ್ರಗ್ಸ್ ಹಾಗೂ ಎನ್.ಡಿ.ಪಿ.ಎಸ್. ಕಾಯ್ದೆಯಡಿ ಮಾದಕ ವಸ್ತುಗಳ ಸಾಗಾಟ, ಮಾರಾಟ ಮತ್ತು ಸೇವನೆ ಗಂಭೀರ ಅಪರಾಧವಾಗಿದ್ದು, ಇಂತಹ ಚಟುವಟಿಕೆಗಳಿಂದ ದೂರವಿರಬೇಕು ಎಂದು ಸಲಹೆ ನೀಡಿದರು.

ಇದೇ ವೇಳೆ ಸಂಚಾರ ನಿಯಮಗಳನ್ನು ಕಡ್ಡಾಯವಾಗಿ ಪಾಲಿಸುವುದು, ಹೆಲ್ಮೆಟ್ ಧರಿಸುವುದು, ವಾಹನ ಚಲಾಯಿಸುವಾಗ ಅಗತ್ಯ ದಾಖಲೆಗಳನ್ನು ಹೊಂದಿರುವುದು ಹಾಗೂ ರಸ್ತೆ ಸುರಕ್ಷತಾ ನಿಯಮಗಳನ್ನು ಅನುಸರಿಸುವ ಮಹತ್ವವನ್ನು ತಿಳಿಸಿದರು.

ಬಾಲ್ಯವಿವಾಹದ ದುಷ್ಪರಿಣಾಮಗಳು, ಬಾಲ್ಯವಿವಾಹ ನಿಷೇಧ ಕಾಯ್ದೆಯ ಪ್ರಮುಖ ಅಂಶಗಳು ಹಾಗೂ ಮಕ್ಕಳ ಮೇಲಿನ ಲೈಂಗಿಕ ದೌರ್ಜನ್ಯ ತಡೆಗಟ್ಟುವ ಪೋಕ್ಸೋ (ಕಔಅ–ಖಔ) ಕಾಯ್ದೆಯ ಕುರಿತು ಮಾಹಿತಿ ನೀಡಿ, ಯಾವುದೇ ಸಮಸ್ಯೆ ಎದುರಾದಲ್ಲಿ ಪೊಲೀಸ್ ಇಲಾಖೆಯ ಸಹಾಯ ಪಡೆಯುವಂತೆ ವಿದ್ಯಾರ್ಥಿಗಳಿಗೆ ಮನವಿ ಮಾಡಿದರು. ಕಾರ್ಯಕ್ರಮದಲ್ಲಿ ಶಾಲೆಯ ಮುಖ್ಯೋಪಾಧ್ಯಾಯರು, ಶಿಕ್ಷಕರು, ಪೊಲೀಸ್ ಸಿಬ್ಬಂದಿ ಹಾಗೂ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.



# ಸರಿಯಾದ ಸಮಯಕ್ಕೆ ಬಸ್‌ಗಳಿಲ್ಲದೆ ವಿದ್ಯಾರ್ಥಿಗಳ ಪರದಾಟ: ಅಂಬೇಡ್ಕರ್ ಸರ್ಕಲ್‌ನಲ್ಲಿ ವಿದ್ಯಾರ್ಥಿಗಳು ಹಾಗೂ ಕರವೇ ಪ್ರತಿಭಟನೆ

❑ ನೈಜ್ಯ ದೆಸೆ ನ್ಯೂಸ್

**ಜಾಲಹಳ್ಳಿ (ದೇವದುರ್ಗ), ಆ.6: ಜಾಲಹಳ್ಳಿ ಹಾಗೂ ಸುತ್ತಮುತ್ತಲಿನ ಗ್ರಾಮಗಳಿಗೆ ಕೆ-ಎಸ್‌ಆರ್‌ಟಿಸಿ ಬಸ್‌ಗಳು ನಿಗದಿತ ಸಮಯಕ್ಕೆ ಸಂಚರಿಸದಿರುವುದನ್ನು ಖಂಡಿಸಿ, ವಿದ್ಯಾರ್ಥಿಗಳು ಹಾಗೂ ಕರ್ನಾಟಕ ರಕ್ಷಣಾ ವೇದಿಕೆ (ಕರವೇ) ಪದಾಧಿಕಾರಿಗಳು ಜಾಲಹಳ್ಳಿಯ ಅಂಬೇಡ್ಕರ್ ಸರ್ಕಲ್‌ನಲ್ಲಿ ಪ್ರತಿಭಟನೆ ನಡೆಸಿದರು.**

ಪ್ರತಿಭಟನಾಕಾರರು, ಶಾಲೆ ಮತ್ತು ಕಾಲೇಜುಗಳಿಗೆ ಪ್ರತಿದಿನ ತೆರಳುವ ವಿದ್ಯಾರ್ಥಿಗಳು ಸಮರ್ಪಕ ಬಸ್‌ಗಳ ಕೊರತೆಯಿಂದ ತೀವ್ರ ತೊಂದರೆ ಅನುಭವಿಸುತ್ತಿದ್ದು, ಇದರಿಂದ ಅವರ ಶಿಕ್ಷಣಕ್ಕೂ ಅಡಚಣೆಯಾಗುತ್ತಿದೆ ಎಂದು ಆರೋಪಿಸಿದರು.



ತಾಲೂಕಿನ ಸಾರಿಗೆ ಇಲಾಖೆಯ ಅಧಿಕಾರಿಗಳು ಹಾಗೂ ಸ್ಥಳೀಯ ಶಾಸಕರು ತಕ್ಷಣ ಸಮಸ್ಯೆಗೆ ಸ್ಪಂದಿಸಿ, ವಿದ್ಯಾರ್ಥಿಗಳ ಅನುಕೂಲಕ್ಕಾಗಿ ನಿಗದಿತ ವೇಳಾಪಟ್ಟಿಯಂತೆ ಬಸ್‌ಗಳನ್ನು ಓಡಿಸುವುದರ ಜೊತೆಗೆ ಅಗತ್ಯವಿರುವ ಹೆಚ್ಚುವರಿ ಬಸ್‌ಗಳ ವ್ಯವಸ್ಥೆ ಮಾಡಬೇಕು ಎಂದು ಆಗ್ರಹಿಸಿದರು.

ಬೇಡಿಕೆಗಳನ್ನು ನಿರ್ಲಕ್ಷಿಸಿದರೆ ಮುಂದಿನ ದಿನಗಳಲ್ಲಿ ಕರವೇ ಹಾಗೂ ವಿದ್ಯಾರ್ಥಿಗಳ ಒಕ್ಕೂಟದ ನೇತೃತ್ವದಲ್ಲಿ ಉಗ್ರ ಹೋರಾಟ ಹಮ್ಮಿಕೊಳ್ಳಲಾಗುವುದು ಎಂದು ಪ್ರತಿಭಟನಾಕಾರರು ಎಚ್ಚರಿಕೆ ನೀಡಿದರು. ಪ್ರತಿಭಟನೆಯಲ್ಲಿ ಶಾಲಾ–ಕಾಲೇಜು ವಿದ್ಯಾರ್ಥಿಗಳು, ಗ್ರಾಮ ಪಂಚಾಯಿತಿ ಸದಸ್ಯ ಮಕ್ತುಮ್ ಪರಾಶಿ, ಕರವೇ ಮುಖಂಡರಾದ ನಂದಪ್ಪ, ತಮ್ಮಣ್ಣ ಹೆರುಂಡಿ, ಕರವೇ ಪದಾಧಿಕಾರಿಗಳು ಹಾಗೂ ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿದ್ದರು.

# ಉದ್ಯೋಗ ಸಂಪರ್ಕ ಸೇತು ಅಭಿಯಾನಕ್ಕೆ ಚಾಲನೆ

❑ ನೈಜ್ಯ ದೆಸೆ ನ್ಯೂಸ್

**ಮಾನ್ವಿ: ರಾಜ್ಯಾದ್ಯಂತ ನಿರುದ್ಯೋಗಿ ಯುವಕರಿಗೆ ಉದ್ಯೋಗಾವಕಾಶಗಳನ್ನು ಕಲ್ಪಿಸುವ ಹಾಗೂ ಉದ್ಯೋಗದಾತರೊಂದಿಗೆ ಯುವಕರನ್ನು ಸಂಪರ್ಕಿಸುವ ಉದ್ದೇಶದಿಂದ ಸೋಲಿಡಾರಿಟಿ ಯೂತ್ ಮೂವ್ಮೆಂಟ್ ಹಮ್ಮಿಕೊಂಡಿರುವ *"ಉದ್ಯೋಗ ಸಂಪರ್ಕ ಸೇತು ಅಭಿಯಾನ"*ದ ಅಂಗವಾಗಿ ಪಟ್ಟಣದ ಕುಬ್ಬ ಮಸೀದಿ ಸಮೀಪದ ಸೋಲಿಡಾರಿಟಿ ಯೂತ್ ಮೂವ್ಮೆಂಟ್ ಕಚೇರಿಯಲ್ಲಿ ಅಭಿಯಾನದ ಭಿತ್ತಿಪತ್ರಗಳನ್ನು ದಾರುಸ್ಸಲಾಂ ಫೌಂಡೇಶನ್‌ನ ಮಾನ್ವಿ ತಾಲೂಕು ಅಧ್ಯಕ್ಷ ಸೈಯದ್ ಅಕ್ಬರ್ ಪಾಶಾ ಹುಸೇನಿ ಬಿಡುಗಡೆಗೊಳಿಸಿದರು.**

ಬಳಿಕ ಮಾತನಾಡಿದ ಅವರು, ರಾಜ್ಯ ಮಟ್ಟದಲ್ಲಿ ಅಕ್ಟೋಬರ್ 15ರವರೆಗೆ ನಡೆಯಲಿರುವ ಈ ಅಭಿಯಾನವು ನಿರುದ್ಯೋಗಿ ಯುವಕರಿಗೆ ಉದ್ಯೋಗದ ಅವಕಾಶಗಳನ್ನು ಪರಿಚಯಿಸುವ ಜೊತೆಗೆ ವೃತ್ತಿ ಬೆಳವಣಿಗೆಗೆ ಅಗತ್ಯವಾದ ಮಾರ್ಗದರ್ಶನ ಹಾಗೂ ನೆಟ್‌ವರ್ಕಿಂಗ್‌ಗೆ ವೇದಿಕೆಯಾಗಲಿದೆ ಎಂದು ತಿಳಿಸಿದರು. ಭಿತ್ತಿಪತ್ರದಲ್ಲಿರುವ ಕ್ಯೂಆರ್ ಕೋಡ್ ಅನ್ನು ಸ್ಕ್ಯಾನ್ ಮಾಡುವ ಮೂಲಕ ಆಸಕ್ತ ಯುವಕರು ಅಭಿಯಾನದಲ್ಲಿ ನೋಂದಾಯಿಸಿಕೊಂಡು ಇದರ ಪ್ರಯೋಜನ ಪಡೆಯಬಹುದು ಎಂದು ಹೇಳಿದರು.




ಹೆಚ್ಚಿನ ಮಾಹಿತಿಗಾಗಿ 6366234200 ಸಂಖ್ಯೆಯನ್ನು ಸಂಪರ್ಕಿಸಬಹುದಾಗಿದೆ ಎಂದರು. ಈ ಸಂದರ್ಭದಲ್ಲಿ ವೆಲ್ಫೇರ್ ಪಾರ್ಟಿ ಆಫ್ ಇಂಡಿಯಾ ರಾಯಚೂರು ಜಿಲ್ಲಾಧ್ಯಕ್ಷ ಮೌಲಾನಾ ಶೇಖ್ ಫರೀದ್ ಉಮಾರಿ, ಜಮಾಅತೆ ಇಸ್ಲಾಮಿ ಹಿಂದ್ ಉಪಾಧ್ಯಕ್ಷ ಎಂ.ಎ.ಎಚ್. ಮುಕೀಮ್, ವೆಲ್ಫೇರ್ ಪಾರ್ಟಿ ಆಫ್ ಇಂಡಿಯಾ ತಾಲೂಕು ಅಧ್ಯಕ್ಷ ಶೇಖ್ ಬಾಬಾ ಹುಸೇನ್ ಗಚ್ಚಿ, ಸೋಲಿಡಾರಿಟಿ ಯೂತ್ ಮೂವ್ಮೆಂಟ್ ತಾಲೂಕು ಅಧ್ಯಕ್ಷ ನಾಸಿರ್ ಅಲಿ ಹಾಗೂ ಪದಾಧಿಕಾರಿಗಳಾದ ಗಫ್ಫರ್ ಖಾನ್, ಹಸಿಬುರ್ ರೆಹಮಾನ್, ರೋಹಿತ್ ಬಾಷಾ ಉಪಸ್ಥಿತರಿದ್ದರು.

ಚಿತ್ರ ಶೀರ್ಷಿಕೆ: ಮಾನ್ವಿಯ ಸೋಲಿಡಾರಿಟಿ ಯೂತ್ ಮೂವ್ಮೆಂಟ್ ಕಚೇರಿಯಲ್ಲಿ ಉದ್ಯೋಗ ಸಂಪರ್ಕ ಸೇತು ಅಭಿಯಾನದ ಭಿತ್ತಿಪತ್ರವನ್ನು ದಾರುಸ್ಸಲಾಂ ಫೌಂಡೇಶನ್ ತಾಲೂಕು ಅಧ್ಯಕ್ಷ ಸೈಯದ್ ಅಕ್ಬರ್ ಪಾಶಾ ಹುಸೇನಿ ಬಿಡುಗಡೆಗೊಳಿಸಿದರು.

OWNER, PUBLISHER, PRINTER BY IRFAN K H NO. 3/117, BALAGANUR, SINDHANOOR, RAICHUR-584138 KARNATAKA AND PRINTED AT SHIVANI PRINTERS, HULKOTI, NEW COURT, OPPOSITE PLOT NO. 28 RS NO. 312/3B, GARAG COMPLEX, GADAG-582101